ಭಾನುವಾರ, 14.12.2025
ಬೆಂಗಳೂರು, ಬೆಲೆ: 5ರೂ,
2 ಪುಟಗಳು
ಸಂಪುಟ 01 - ಸಂಚಿಕೆ 113
Digital Varthe Kannada Daily
Volume 01 - Issue 113
Sunday 14.12.2025
Price: 5/- Rs
2 Pages Bangalore

PRGI/RNI: KNKAN/25/A1348

# ಡಿಜಿಟಲ್ ವಾರ್ತೆ

ಕನ್ನಡ ದಿನಪತ್ರಿಕೆ
ಕನ್ನಡಿಗರ ಶಕ್ತಿ
DIGITAL VARTHE
digitalvarthe@gmail.com
www.digitalvarthe.com

## ಸ್ವಾಮೀಜಿಯಿಂದ ಮಹಿಳೆಗೆ ಲೈಂಗಿಕ ಕಿರುಕುಳ



**ದೇವನಹಳ್ಳಿ:**ಜಿಲ್ಲೆಯ ದೊಡ್ಡಬಳ್ಳಾಪುರ ತಾಲೂಕು ಮೆಳೆಕೋಟೆ ಯಲ್ಲಿರುವ ಮಹರ್ಷಿ ಶ್ರೀ ವಾಲ್ಮೀಕಿ ಗುರುಕುಲ ಪೀಠದ ಸ್ವಾಮೀಜಿ ಬ್ರಹ್ಮಾನಂದ ಗುರೂಜಿ ವಿರುದ್ಧ ಮಹಿಳೆಯೊಬ್ಬರು ಗಂಭೀರ ಆರೋಪಗಳನ್ನು ಮಾಡಿದ್ದಾರೆ. ಸೈಟ್ ಕೊಡಿಸುವುದಾಗಿ ಹೇಳಿ ಲಕ್ಷಾಂತರ ರೂಪಾಯಿ ಹಣ ಪಡೆದಿದ್ದಲ್ಲದೆ, ಅದನ್ನು ವಾಪಸ್ ಕೊಡಿಸುವ ನೆಪದಲ್ಲಿ ಲೈಂಗಿಕ ಕಿರುಕುಳ ನೀಡಲಾಗಿದೆ ಎಂದು ಮಹಿಳೆ ದೂರಿದ್ದಾರೆ. ಮಹಿಳೆ ಮತ್ತು ಆಕೆಯ ಪತಿ ಸ್ವಾಮೀಜಿ ನಿವಾಸದ ಬಳಿಯೇ ವಾಸವಿದ್ದು, ಪರಿಚಯವಾಗಿತ್ತು ಎನ್ನಲಾಗಿದೆ.

ಸ್ವಾಮೀಜಿ ತಮ್ಮ ಪರಿಚಯದವರಿಂದ ಕಡಿಮೆ ಬೆಲೆಗೆ ಸೈಟ್ ಕೊಡಿಸುವ ಭರವಸೆ ನೀಡಿದ್ದರು. 13 ಲಕ್ಷ ರೂ. ಮೌಲ್ಯದ ಸೈಟ್ ಅನ್ನು 12 ಲಕ್ಷಕ್ಕೆ ಕೊಡಿಸುವುದಾಗಿ ಮಾತುಕತೆ ನಡೆಸಿದ್ದರು. ಆದರೆ, ತಮ್ಮ ಬಳಿ 8 ಲಕ್ಷ ರೂ. ಮಾತ್ರ ಇದೆ ಎಂದು ಮಹಿಳೆ ಹೇಳಿದ್ದರು. ಹೀಗಾಗಿ ಉಳಿದ ಹಣಕ್ಕೆ ಸಹಾಯ ಮಾಡುವುದಾಗಿ ಸ್ವಾಮೀಜಿ ಹೇಳಿದ್ದರು ಎಂಬ ಆರೋಪವಿದೆ.

ಮಹಿಳೆ ಬಳಿಯಿದ್ದ 8 ಲಕ್ಷ ರೂ.ಗಳಲ್ಲಿ 5 ಲಕ್ಷ ರೂಪಾಯಿಯನ್ನು ಅಡ್ವಾನ್ಸ್ ಆಗಿ ಮತ್ತೊಬ್ಬರಿಗೆ ಸ್ವಾಮೀಜಿ ಕೊಡಿಸಿದ್ದಾರೆ. ಆದರೆ ಒಂದು ವರ್ಷ ಕಳೆದರೂ ಸೈಟ್ ನೀಡದೆ, ಅಡ್ವಾನ್ಸ್ ಹಣವನ್ನೂ ವಾಪಸ್ ನೀಡದೇ ನಿರ್ಲಕ್ಷ್ಯ ವಹಿಸಲಾಗಿದೆ ಎಂದು ಮಹಿಳೆ ಆರೋಪಿಸಿದ್ದಾರೆ .ಒಂದು ವರ್ಷವಾದರೂ ಸೈಟ್ ಕೊಡದ ಕಾರಣ ಹಣವನ್ನು ಮಹಿಳೆ ವಾಪಸ್ ಕೇಳಿದ್ದಾರೆ. ಆಗ ಸ್ವಾಮೀಜಿ, "ರೂಂಗೆ ಬಾ ಹಣ ಕೊಡಿಸುತ್ತೇನೆ, ನಿನಗೆ ಹಣ ಬೇಕು, ನನಗೆ ಮಜಾ ಬೇಕು" ಎಂದು ಹೇಳಿದ್ದಾರೆ ಎನ್ನಲಾಗಿದೆ. ಸ್ವಾಮೀಜಿಯ ಈ ಮಾತುಗಳನ್ನು ಮಹಿಳೆ ಮೊಬೈಲ್‌ನಲ್ಲಿ ಆಡಿಯೋ ಹಾಗೂ ವಿಡಿಯೋ ರೂಪದಲ್ಲಿ ರೆಕಾರ್ಡ್ ಮಾಡಿಕೊಂಡಿದ್ದಾರೆ.


ಸ್ವಾಮೀಜಿ ನಿರಂತರವಾಗಿ ಫೋನ್ ಕರೆ, ಆಡಿಯೋ ಮೆಸೇಜ್ ಹಾಗೂ ವಿಡಿಯೋ ಕಾಲ್ ಮಾಡಿ ಕಿರುಕುಳ ನೀಡಿದ್ದಾರೆ. ಅಲ್ಲದೇ ಒಂಟಿಯಾಗಿದ್ದ ವೇಳೆ ಮನೆಗೆ ಬಂದು ಕಿರುಕುಳ ನೀಡಿದ್ದಾರೆ. ಆಡಿಯೋ-ವಿಡಿಯೋಗಳನ್ನು ಡಿಲೀಟ್ ಮಾಡುವಂತೆ ಒತ್ತಡ ಹೇರಿದ್ದು, ಅದಕ್ಕಾಗಿ 50 ಸಾವಿರ ರೂ. ನೀಡುವ ಆಮಿಷವನ್ನೂ ಒಡ್ಡಿದ್ದಾರೆ ಎಂದು ಮಹಿಳೆ ಆರೋಪಿಸಿದ್ದಾರೆ.

ಈ ಎಲ್ಲ ಘಟನೆಗಳು ಗಂಡನಿಗೆ ಗೊತ್ತಾಗಿ ಆತ ತನ್ನನ್ನು ಬಿಟ್ಟು ಹೋಗಿದ್ದಾನೆ ಎಂದೂ ಮಹಿಳೆ ಅಲವತ್ತುಕೊಂಡಿದ್ದಾರೆ. ಸಂತ್ರಸ್ತೆಯು ಈಗಾಗಲೇ ಪೊಲೀಸ್ ಠಾಣೆಗೆ ಆಡಿಯೋ -ವಿಡಿಯೋ ಸಾಕ್ಷ್ಯಗಳೊಂದಿಗೆ ದೂರು ನೀಡಿದ್ದಾರೆ. ಆದರೆ ನ್ಯಾಯ ಸಿಗುತ್ತಿಲ್ಲ ಎಂದು 'ಟಿವಿ9' ಬಳಿ ನೋವು ತೋಡಿಕೊಂಡಿದ್ದಾರೆ.

ಮತ್ತೊಂದೆಡೆ, ಬ್ರಹ್ಮಾನಂದ ಗುರೂಜಿ ಮೆಳೆಕೋಟೆ ಬಳಿ ಸರ್ಕಾರದ ಆರ್ಥಿಕ ನೆರವಿನಿಂದ ಮಹರ್ಷಿ ಶ್ರೀ ವಾಲ್ಮೀಕಿ ಗುರುಕುಲ ಪೀಠ ಆಶ್ರಮವನ್ನು ಸ್ಥಾಪಿಸಿರುವುದು ಕೂಡ ಬಯಲಾಗಿದ್ದು, ಇದೀಗ ಚರ್ಚೆಗೆ ಗ್ರಾಸವಾಗಿದೆ.

ಪ್ರಕರಣದ ಕುರಿತು ಪೊಲೀಸ್ ಇಲಾಖೆ ತನಿಖೆ ನಡೆಸಬೇಕಿದ್ದು, ಆರೋಪಗಳ ಸತ್ಯಾಸತ್ಯತೆ ಹೊರಬರಬೇಕಿದೆ. ಏತನ್ಮಧ್ಯೆ, ಮಹಿಳೆ ಮತ್ತು ಆಕೆಯ ಕುಟುಂಬದವರು ಹಣಕ್ಕಾಗಿ ಬ್ಲ್ಯಾಕ್ ಮೇಲ್ ಮಾಡಿದ್ದಾರೆ ಎಂದು ಬ್ರಹ್ಮಾನಂದ ಸ್ವಾಮೀಜಿ ಪ್ರತಿ ದೂರು ದಾಖಲಿಸಿದ್ದಾರೆ. ಹಣ ಕೊಡಬೇಕು. ಇಲ್ಲದಿದ್ದರೆ ನಿಮ್ಮ ಫೋಟೊ, ಆಡಿಯೋ, ವಿಡಿಯೋಗಳನ್ನು ಸಾಮಾಜಿಕ ಮಾಧ್ಯಮಗಳಲ್ಲಿ ಪೋಸ್ಟ್ ಮಾಡಿ ಮಾನ ಮತ್ತು ಖ್ಯಾತಿಯನ್ನು ಹಾಳು ಮಾಡುತ್ತೇವೆಂದು ಬೆದರಿಕೆಯೊಡ್ಡಿದ್ದಾರೆ ಎಂದು ಪೊಲೀಸರಿಗೆ ನೀಡಿದ ದೂರಿನಲ್ಲಿ ಸ್ವಾಮೀಜಿ ಉಲ್ಲೇಖಿಸಿದ್ದಾರೆ.

## ಉದ್ಯಮಿಯ ಮೇಲೆ ಫೈರಿಂಗ್ ಕಾನೂನು ವಿದ್ಯಾರ್ಥಿ ಅರೆಸ್ಟ್



**ಬೆಂಗಳೂರು:** ಉದ್ಯಮಿಯ ಮೇಲೆ ಏರ್‌ಗನ್‌ನಿಂದ ಫೈರಿಂಗ್ ಮಾಡಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಬಸವನಗುಡಿ ಪೊಲೀಸರು ಆರೋಪಿಯನ್ನು ಬಂಧಿಸಲಾಗಿದೆ. ಡಿಸೆಂಬರ್10ರ ರಾತ್ರಿ 8:30ರ ಸುಮಾರಿಗೆ ಕೃಷ್ಣರಾವ್ ಪಾರ್ಕ್‌ನಲ್ಲಿ ವಾಕಿಂಗ್ ಮಾಡುತ್ತಿದ್ದ ರಾಜ್‌ಗೋಪಾಲ್ ಅವರ ಮೇಲೆ ಫೈರಿಂಗ್ ನಡೆದಿತ್ತು. ತನಿಖೆಗೆ ಇಳಿದ ಪೊಲೀಸರಿಗೆ ನರ್ತಕಿ ಹಾಗೂ ಕಾಗಿಲ್ ಬಾರ್ ಮಾಲೀಕ ರಾಜಗೋಪಾಲ್ ಅವರಿಗೆ ಯಾವುದೇ ಬೆದರಿಕೆ ಇಲ್ಲದ ವಿಚಾರ ಗೊತ್ತಾಗಿದೆ.

ಬೆದರಿಕೆ ಇಲ್ಲದೇ ಇದ್ದರೂ ಏರ್‌ಗನ್‌ನಿಂದ ಶೂಟ್ ಹೇಗಾಯ್ತು? ಯಾರಾದ್ರೂ ಹತ್ಯೆಗೆ ಸಂಚು ರೂಪಿಸಿದ್ರಾ? ಟಾರ್ಗೆಟ್ ಮಾಡಿ ಹೊಡೆಯಲು ಯಾರಾದರೂ ಮುಂದಾದ್ರಾ ಎಂಬ ಪ್ರಶ್ನೆ ಎದ್ದಿತ್ತು. ಈ ಎಲ್ಲಾ ಆಯಾಮಗಳ ತನಿಖೆಗೆ ಇಳಿದರೂ ಯಾವುದೇ ಖಚಿತತೆ ಇರಲಿಲ್ಲ. ಹೀಗಾಗಿ ಬುಲೆಟ್ ಎಲ್ಲಿಂದ ಹಾರಿ ಬಂದಿದೆ ಎಂಬುದರ ಜಾಡು ಹಿಡಿದು ಪೊಲೀಸರು ತನಿಖೆ ಆರಂಭಿಸಿದರು. ಈ ವೇಳೆ ಹೊರಗಿನಿಂದ ಗುಂಡು ಬಂದಿರಬಹುದು ಎಂಬ ಅನುಮಾನದ ಹಿನ್ನೆಲೆಯಲ್ಲಿ ಗುಂಡು ಬಂದ ಕಡೆಯ ಫ್ಲಾಟ್‌ಗಳ ಪರಿಶೀಲನೆಗೆ ಮುಂದಾದರು. ಪರಿಶೀಲನೆ ವೇಳೆ ಅಫ್ಜಲ್ ಇರುವ ಫ್ಲಾಟ್‌ನಿಂದ ಫೈರ್ ಆಗಿರುವುದು ಪತ್ತೆಯಾಗಿದೆ. ಪೊಲೀಸರು ವಶಕ್ಕೆ ಪಡೆದು ವಿಚಾರಣೆ ನಡೆಸಿದಾಗ ನಾನು ಕಾನೂನು ಪದವಿ ಓದುತ್ತಿದ್ದೇನೆ.

ಮನೆಯಲ್ಲಿ ಏರ್‌ಗನ್‌ನಿಂದ ಶೂಟಿಂಗ್ ಅಭ್ಯಾಸ ಮಾಡುತ್ತಿದ್ದೇನೆ. ಅಭ್ಯಾಸ ಮಾಡುತ್ತಿದ್ದಾಗ ಗುರಿ ತಪ್ಪಿ ಕಿಟಕಿಯಿಂದ ಹೊರ ಹೋಗಿದೆ ಎಂದು ಅಫ್ಜಲ್ ಹೇಳಿದ್ದಾನೆ. ರಾಜ್‌ಗೋಪಾಲ್ ಅವರು ಸ್ನೇಹಿತರನ್ನು ಭೇಟಿಯಾಗಲು ಪಾರ್ಕ್‌ಗೆ ಬಂದು ವಾಕಿಂಗ್ ಮಾಡುತ್ತಿದ್ದರು. ಗುಂಡೇಟಿನಿಂದ ಕತ್ತಿನ ಭಾಗಕ್ಕೆ ಗಾಯವಾಗಿದ್ದು ಈಗ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

## ಪೊಲೀಸ್ ಇಲಾಖೆಯಲ್ಲೇ ಭೂಗಳ್ಳ: ₹25 ಕೋಟಿ ಮೌಲ್ಯದ ಜಮೀನು ಪರಭಾರೆ




**ನೆಲಮಂಗಲ:** ಪೊಲೀಸ್ ಇಲಾಖೆಯನ್ನೇ ಬೆಚ್ಚಿಬೀಳಿಸುವ ಭೂಗಳ್ಳತನದ ಭಾರೀ ಪ್ರಕರಣ ನೆಲಮಂಗಲ ತಾಲೂಕಿನಲ್ಲಿ ಬೆಳಕಿಗೆ ಬಂದಿದೆ. ವಂಚಕರನ್ನು ಸೆರೆ ಹಿಡಿಯಬೇಕಿದ್ದ ಆರಕ್ಷಕನ ವಿರುದ್ಧವೇ ಭೂಗಳ್ಳತನದ ಆರೋಪ ಕೇಳಿ ಬಂದಿದ್ದು, ನೆಲಮಂಗಲ ಗ್ರಾಮಾಂತರ ಠಾಣೆಯ ಹೆಡ್ ಕಾನ್ಸ್‌ಟೇಬಲ್ ವಿರುದ್ಧ ಎಫ್‌ಐಆರ್ ದಾಖಲಾಗಿದೆ.

ಹೆಡ್ ಕಾನ್ಸ್‌ಟೇಬಲ್ ಗಿರಿಜೇಶ್ ಜೊತೆಗೆ ಮನೋಜ್, ರೋಹಿಣಿ ಸೇರಿದಂತೆ ಇನ್ನೂ ಹಲವರ ವಿರುದ್ಧವೂ ಭೂಗಳ್ಳತನದ ಪ್ರಕರಣ ದಾಖಲಾಗಿದ್ದು, ಸುಮಾರು 25 ಕೋಟಿ ರೂ. ಮೌಲ್ಯದ ಭೂಮಿ ಲಪಟಾಯಿಸಿದ ಆರೋಪ ಕೇಳಿಬಂದಿದೆ. ಈ ಹಿಂದೆಯೂ ಗಿರಿಜೇಶ್ ವಿರುದ್ಧ ಹಲವು ಪ್ರಕರಣಗಳು ದಾಖಲಾಗಿದ್ದವು. ಸಸ್ಪೆಂಡ್ ಆಗಿ ಮನೆಲ್ಲಿದ್ದರೂ ಬುದ್ದಿ ಕಲಿಯದ ಆಸಾಮಿ, ಭೂ ಮಾಲೀಕರಿಗೆ ತಿಳಿಯದಂತೆ ನಕಲಿ ದಾಖಲೆಗಳನ್ನು ಸೃಷ್ಟಿಸಿ ಜಮೀನನ್ನು ತನ್ನ ಹಾಗೂ ಸಹಚರರ ಹೆಸರಿಗೆ ರಿಜಿಸ್ಟರ್ ಮಾಡಿಸಿಕೊಂಡಿದ್ದಾನೆ ಎಂದು ಆರೋಪಿಸಲಾಗಿದೆ. 25 ಕೋಟಿ ರೂ. ಮೌಲ್ಯದ 8 ಎಕರೆ ಜಮೀನು ಪರಭಾರೆ

ನೆಲಮಂಗಲ ತಾಲೂಕು ಸೋಂಪುರ ಹೋಬಳಿ, ಮಾಚನಹಳ್ಳಿ ಗ್ರಾಮದಲ್ಲಿರುವ ಥ್ಯಾಂಪಿ ಮ್ಯಾಥ್ಯೂ ಅವರಿಗೆ ಸೇರಿದ 8 ಎಕರೆ ಜಮೀನನ್ನು ಅವರಿಗೆ ತಿಳಿಯದೆ ಮೂರ್ನಾಲ್ಕು ಜನರ ಮೂಲಕ ರಿಜಿಸ್ಟರ್ ಮಾಡಲಾಗಿದೆ ಎಂದು ಎಫ್‌ಐಆರ್‌ನಲ್ಲಿ ಉಲ್ಲೇಖಿಸಲಾಗಿದೆ.

ಈ ಜಮೀನು ಕರ್ನಾಟಕ ಕೈಗಾರಿಕಾ ಪ್ರದೇಶಗಳ ಅಭಿವೃದ್ಧಿ ಮಂಡಳಿ( KIADB) ಸೇರಿದ್ದು, ಅದರ ಪರಿಹಾರ ಹಣ ಲಪಟಾಯಿಸಲು ಗಿರಿಜೇಶ್ ಯೋಜನೆ ರೂಪಿಸಿದ್ದಾನೆ ಎಂಬ ಗಂಭೀರ ಆರೋಪವೂ ಕೇಳಿಬಂದಿದೆ. ರಿಜಿಸ್ಟರ್ ಆಗದೇ ಇದ್ದರೂ ದಾಖಲೆಗಳಲ್ಲಿ ಗಿರಿಜೇಶ್ ಹಾಗೂ ಇನ್ನಿಬ್ಬರ ಹೆಸರುಗಳಿರುವುದು ಅನುಮಾನಕ್ಕೆ ಕಾರಣವಾಗಿದೆ. ಈ ಸಂಬಂಧ ಥ್ಯಾಂಪಿ ಮ್ಯಾಥ್ಯೂ ನೀಡಿದ ದೂರಿನ ಮೇರೆಗೆ ಡಾಬಸ್ ಪೇಟೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಖ್ಯಾತ ಬಹುಭಾಷಾ ನಟಿ ಮೇಲೆ ಲೈಂಗಿಕ ದೌರ್ಜನ್ಯ



**ತಿರುವನಂತಪುರಂ:** ಕನ್ನಡ ಸೇರಿ ಬಹುಭಾಷೆಗಳಲ್ಲಿ ನಟಿಸಿರುವ ಮಲಯಾಳಂ ಮೂಲದ ನಟಿಯೊಬ್ಬರ ಮೇಲೆ 2017ರಲ್ಲಿ ನಡೆದಿದ್ದ ಲೈಂಗಿಕ ದೌರ್ಜನ್ಯ, ಅಪಹರಣ ಪ್ರಕರಣದ ಆದೇಶ ಹೊರಬಿದ್ದಿದೆ. ಪ್ರಮುಖ ಆರೋಪಿ ಪಲ್ಸರ್ ಸುನಿ ಸೇರಿ 6 ಮಂದಿ ಆರೋಪಿಗಳಿಗೆ 20 ವರ್ಷಗಳ ಕಠಿಣ ಜೈಲು ಶಿಕ್ಷೆ ವಿಧಿಸಿ ಕೇರಳ ನ್ಯಾಯಾಲಯ ಇಂದು ಆದೇಶ ಹೊರಡಿಸಿದೆ. ಇದೇ ಪ್ರಕರಣದಲ್ಲಿ ನಟ ದಿಲೀಪ್‌ರನ್ನ ಕೋರ್ಟ್ ಖುಲಾಸೆ ಮಾಡಿದೆ. ಪ್ರಕರಣ ಸಂಬಂಧ ಡಿಸೆಂಬರ್ 8 ರಂದು ತೀರ್ಪು ಪ್ರಕಟಿಸಿದ್ದ ಎರ್ನಾಕುಲಂ ಜಿಲ್ಲಾ ಮತ್ತು ಸೆಷನ್ಸ್ ಕೋರ್ಟ್‌ನ ನ್ಯಾಯಾಧೀಶರಾದ ಹನಿ ಎಂ. ವರ್ಗೀಸ್ ಅವರು ಪ್ರಕರಣದ ಇನ್ನೊಬ್ಬ ಆರೋಪಿ ಮಲಯಾಳಂ ನಟ ದಿಲೀಪ್‌ರನ್ನ ಅವರನ್ನ ಖುಲಾಸೆಗೊಳಿಸಿದ್ದರು. ಪ್ರಕರಣದ ಉಳಿದ ಆರೋಪಿಗಳಾದ ಸುನಿಲ್ ಎನ್.ಎಸ್ ಅಲಿಯಾಸ್ ಪಲ್ಸರ್ ಸುನಿ ಮಾರ್ಟಿನ್ ಆಂಟೋನಿ, ಮಣಿಕಂಠನ್ ಬಿ, ವಿಜೀಶ್ ವಿಪಿ, ಸಲೀಂ ಎಚ್ ಅಕಾ ವಡಿವಲ್ ಸಲೀಂ ಹಾಗೂ ಪ್ರದೀಪ್ ಅವರನ್ನು ದೋಷಿಗಳೆಂದು ಪರಿಗಣಿಸಿ ಸಾಮೂಹಿಕ ಅತ್ಯಾಚಾರ ಕೃತ್ಯಕ್ಕಾಗಿ 20 ವರ್ಷಗಳ ಕಠಿಣ ಜೈಲು ಶಿಕ್ಷೆ ವಿಧಿಸಿತು. ಇದರೊಂದಿಗೆ ಎಲ್ಲಾ ಅಪರಾಧಿಗಳೂ 20 ಸಾವಿರ ರೂ. ದಂಡ ಕಟ್ಟಬೇಕು ಎಂದು ಕೋರ್ಟ್ ಹೇಳಿದೆ.

ಈ ಪ್ರಕರಣದಲ್ಲಿ ಮೊದಲ ಆರೋಪಿ ಎನ್.ಎಸ್. ಸುನಿಲ್ (ಪಲ್ಸರ್ ಸುನಿ). ಎರಡನೇ ಆರೋಪಿ ಮಾರ್ಟಿನ್ ಆಂಟೋನಿ, ಮೂರನೇ ಆರೋಪಿ ಬಿ. ಮಣಿಕಂದನ್, 4ನೇ ಆರೋಪಿ ವಿ.ಪಿ. ವಿಜೀಶ್, ಐದನೇ ಆರೋಪಿ ಎಚ್. ಸಲೀಂ, ಮತ್ತು ಆರನೇ ಆರೋಪಿ ಪ್ರದೀಪ್, 50 ಸಾವಿರ ರೂಪಾಯಿ ದಂಡ ಪಾವತಿಸದಿದ್ದರೆ, ಅವರು ಇನ್ನೂ 1 ವರ್ಷ ಜೈಲು ಶಿಕ್ಷೆ ಅನುಭವಿಸಬೇಕಾಗುತ್ತದೆ ಎಂದು ಆದೇಶದಲ್ಲಿ ತಿಳಿಸಿದೆ.

ದಂಡದ ಮೊತ್ತದಿಂದ ಸಂತ್ರಸ್ಥೆಗೆ 5 ಲಕ್ಷ ರೂ.ಗಳನ್ನು ನೀಡಬೇಕು ಎಂದು ತೀರ್ಪಿನಲ್ಲಿ ಹೇಳಲಾಗಿದೆ. ಮೊದಲ ಆರೋಪಿ ಸುನಿಲ್‌ಗೆ ಐಟಿ ಕಾಯ್ದೆಯಡಿ ಹೆಚ್ಚುವರಿಯಾಗಿ 5 ವರ್ಷ ಜೈಲು ಶಿಕ್ಷೆ ವಿಧಿಸಲಾಗಿದೆ. ಆದಾಗ್ಯೂ, 20 ವರ್ಷಗಳ ಕಠಿಣ ಜೈಲು ಶಿಕ್ಷೆಯ ಜೊತೆಗೆ ಇದನ್ನು ಅನುಭವಿಸಬೇಕಾಗುತ್ತದೆ. ಎಲ್ಲಾ ಆರೋಪಿಗಳನ್ನು ವಿಯ್ಯೂರು ಜೈಲಿಗೆ ಕಳುಹಿಸಲಾಗುವುದು. ಜೈಲು ಬದಲಾಯಿಸಲು ಬಯಸಿದರೆ, ಅವರು ಪ್ರತ್ಯೇಕ ಅರ್ಜಿ ಸಲ್ಲಿಸಬೇಕು. ಆರೋಪಿಗಳ ರಿಮಾಂಡ್ ಅವಧಿಯನ್ನೂ ಕಡಿಮೆ ಮಾಡಲಾಗಿದೆ. ಪಲ್ಸರ್ ಸುನಿ ಶಿಕ್ಷೆ ತಗ್ಗಿಸುವಂತೆ ಮನವಿ

ಇನ್ನೂ ತನ್ನ ವೃದ್ಧ ತಾಯಿಯ ಪಾಲನೆಗೆ ಇರೋದು ತಾನೊಬ್ಬನೇ ಎಂದು ಪಲ್ಸರ್ ಸುನಿ ಶಿಕ್ಷೆಯ ಪ್ರಮಾಣ ತಗ್ಗಿಸುವಂತೆ ಕೋರಿದರು. ಮತ್ತೊಬ್ಬ ಆರೋಪಿ ಆಂಟನಿ ವಾದ ಮಂಡಿಸಿ ಅಪರಾಧದಲ್ಲಿ ತನ್ನ ಪಾತ್ರ ಇಲ್ಲವಾದರೂ ಈಗಾಗಲೇ ಹಲವು ವರ್ಷಗಳನ್ನ ಜೈಲಿನಲ್ಲಿ ಕಳೆದಿದ್ದೇನೆ. ಹೆತ್ತವರು ತನ್ನ ಮೇಲೆ ಅವಲಂಬಿತರಾಗಿದ್ದಾರೆ ಎಂದ. ಮಣಿಕಂಠನ್ ಕೂಡ ಇದೇ ರೀತಿಯ ಮನವಿ ಮಾಡಿದ. ವಿಜೇತ್ ತನ್ನ ಊರಿನ ಸಮೀಪದ ಜೈಲಿಗೆ ಕಳಿಸುವಂತೆ ವಿನಂತಿಸಿದ. ವಡಿವಲ್ ಸಲೀಂ ಮತ್ತು ಪ್ರದೀಪ್ ತಾವು ನಿರಪರಾಧಿಗಳು ಎಂದು ವಾದಿಸಿದರು.

ಆದರೆ ಆರೋಪಿಗಳ ವಾದವನ್ನ ಬಲವಾಗಿ ವಿರೋಧಿಸಿದ ಎಸ್‌ಪಿಪಿ (ಸರ್ಕಾರಿ ವಿಶೇಷ ಅಭಿಯೋಜಕ) ಅಜಕುಮಾರ್, ಸಮಾಜ ಇಂತಹ ಅಪರಾಧಗಳನ್ನ ಸಹಿಸದು ಎಂಬ ಸಂದೇಶವನ್ನ ಶಿಕ್ಷೆ ಸಾರಬೇಕು. ಎಲ್ಲಾ 6 ಜನರಿಗೆ ಅವರ ಅಪರಾಧಗಳಿಗೆ ಜೀವಾವಧಿ ಶಿಕ್ಷೆ ವಿಧಿಸಬೇಕು ಎಂದು ಕೋರಿದರು.

ಪಿತೂರಿಯಲ್ಲಿ ಭಾಗವಹಿಸಿದ ಎಲ್ಲರೂ ತಮ್ಮ ಅಪರಾಧಗಳಿಗೆ ಸಮಾನವಾಗಿ ಹೊಣೆಗಾರರಾಗಿದ್ದರೂ, ಸುನಿ ಮಾತ್ರ ನಿಜವಾಗಿಯೂ ಅತ್ಯಾಚಾರ ಎಸಗಿದ್ದಾನೆ ಎಂಬ ಅಂಶವನ್ನು ಗಣನೆಗೆ ತೆಗೆದುಕೊಳ್ಳಬೇಕಾಗಬಹುದು ಎಂದು ನ್ಯಾಯಾಧೀಶೆ ಹನಿ ಅವರು ಮೌಖಿಕವಾಗಿ ಹೇಳಿದರು.

## ವಿಮಾನದಲ್ಲೇ ಚಿಕಿತ್ಸೆ ನೀಡಿ ಅಮೆರಿಕ ಯುವತಿಯ ಜೀವ ಉಳಿಸಿದ ಅಂಜಲಿ ನಿಂಬಾಳ್ಕರ್

**ಪಣಜಿ:** ಮೂಲತಃ ವೈದ್ಯೆಯೂ ಆಗಿರುವ ಖಾನಾಪುರದ ಮಾಜಿ ಶಾಸಕಿ ಡಾ.ಅಂಜಲಿ ನಿಂಬಾಳ್ಕರ್ ವಿಮಾನದಲ್ಲೇ ಅಮೆರಿಕ ಯುವತಿಯೊಬ್ಬರ ಜೀವ ಉಳಿಸಿದ ಘಟನೆ ನಡೆದಿದೆ.

ಹೌದು. ಗೋವಾದಿಂದ ದೆಹಲಿಗೆ ಹೊರಟಿದ್ದ ವಿಮಾನದಲ್ಲಿ ಅಂಜಲಿ ನಿಂಬಾಳ್ಕರ್ ಪ್ರಯಾಣ ಬೆಳೆಸಿದ್ದರು. ಇದೇ ವಿಮಾನದಲ್ಲಿ ಪ್ರಯಾಣಿಸುತ್ತಿದ್ದ ಅಮೆರಿಕ ಮೂಲದ ಯುವತಿಗೆ ಇದ್ದಕ್ಕಿದ್ದಂತೆ ಕೈ-ಕಾಲುಗಳಲ್ಲಿ ನಡುಕ ಉಂಟಾಗಿತ್ತು, ಕೆಲವೇ ಕ್ಷಣದಲ್ಲಿ ಆಕೆ ಮೂರ್ಛೆ ಹೋಗಿದಳು, ನಾಡಿ ಮಿಡಿತ ಕೂಡ ನಿಂತುಹೋಗಿರುವುದು ಕಂಡುಬಂದಿತ್ತು.

ಸನ್ನಿವೇಶ ಗಮನಿಸಿದ ಅಂಜಲಿ ನಿಂಬಾಳ್ಕರ್ ಅವರು ಕೂಡಲೇ ಯುವತಿಗೆ ಪ್ರಥಮ ಚಿಕಿತ್ಸೆ ನೀಡಿ ಜೀವ ಉಳಿಸಲು ನೆರವಾದರು. ಶ್ವಾಸಕೋಶದ ಮೇಲೆ ಎರಡೂ ಕೈಗಳನ್ನಿಟ್ಟು ಪಂಪ್ ಮಾಡಿದರು. ಬಳಿಕ ಆಕೆ ಉಸಿರಾಡಲು ಶುರು ಮಾಡಿದಳು. ಇದಾದ ಅರ್ಧಗಂಟೆಯಲ್ಲೇ ಯುವತಿ ಮತ್ತೆ ಕುಸಿದುಬಿದ್ದಳು. ಆದ್ರೆ ಅಂಜಲಿ ನಿಂಬಾಳ್ಕರ್ ಅವರ ಪ್ರಯತ್ನದಿಂದಾಗಿ ಮತ್ತೆ ಜೀವ ಉಳಿಯಿತು.

ಅಷ್ಟೇ ಅಲ್ಲದೇ ವಿಮಾನ ದೆಹಲಿ ತಲುಪುವವರೆಗೂ ಆಕೆಯ ಪಕ್ಕದಲ್ಲೇ ಇದ್ದು ಆರೋಗ್ಯ ಸ್ಥಿತಿ ನೋಡಿಕೊಂಡರು. ವಿಮಾನ ದೆಹಲಿ ನಿಲ್ದಾಣ ತಲುಪುತ್ತಿದ್ದಂತೆ ಅಂಬುಲೆನ್ಸ್ ಸಿದ್ಧವಿದೆಯೇ ಎಂಬುದನ್ನ ಖಚಿತಪಡಿಸಿಕೊಂಡರಲ್ಲದೇ, ತಕ್ಷಣ ಆಕೆಯನ್ನ ಆಸ್ಪತ್ರೆ ಸಾಗಿಸಲು ನೆರವಾದರು. ಅಂಜಲಿ ನಿಂಬಾಳ್ಕರ್ ಅವರ ಪ್ರಯತ್ನಕ್ಕೆ ಪೈಲಟ್ ಸೇರಿದಂತೆ ವಿಮಾನ ಸಿಬ್ಬಂದಿ ಹಾಗೂ ಸಹ ಪ್ರಯಾಣಿಕರು ಮೆಚ್ಚುಗೆ ವ್ಯಕ್ತಪಡಿಸಿ, ಅಭಿನಂದನೆ ಸಲ್ಲಿಸಿದರು. ಅಂಜಲಿ ನಿಂಬಾಳ್ಕರ್ ಕಾಂಗ್ರೆಸ್‌ನ ಹಿರಿಯ ನಾಯಕಿ ಹಾಗೂ ರಾಜ್ಯ ಕಾಂಗ್ರೆಸ್ ವಕ್ತಾರರು. ಬೆಳಗಾವಿ ಜಿಲ್ಲೆಯ ಖಾನಾಪುರ ವಿಧಾನಸಭಾ ಕ್ಷೇತ್ರವನ್ನ ಪ್ರತಿನಿಧಿಸುತ್ತಿರುವ ಇವರು, 2018ರಲ್ಲಿ ಇಲ್ಲಿ ಗೆದ್ದು ಶಾಸಕಿಯಾಗಿದ್ದರು.

1976ರ ಆಗಸ್ಟ್ 22ರಂದು ಬೆಳಗಾವಿ ಜಿಲ್ಲೆಯ ಖಾನಾಪುರದಲ್ಲಿ ಹಿಂದೂ ಮರಾಠ ಕುಟುಂಬದಲ್ಲಿ ಅಂಜಲಿ ನಿಂಬಾಳ್ಕರ್ ಜನಿಸಿದರು. ಮಾಸ್ಟರ್ ಆಫ್ ಸರ್ಜರಿ, ಬ್ಯಾಚುಲರ್ ಆಫ್ ಮೆಡಿಸಿನ್, ಬ್ಯಾಚುಲರ್ ಆಫ್ ಸರ್ಜರಿ ಇವರ ವಿದ್ಯಾರ್ಹತೆ. ಇವರು ಸ್ತ್ರೀರೋಗ ಶಾಸ್ತ್ರ ಮತ್ತು ಲ್ಯಾಪ್ರೊಸ್ಕೋಪಿಯಲ್ಲಿ ಎಂಬಿಬಿಎಸ್ ಪದವಿಯ ಜೊತೆಗೆ ಸ್ನಾತಕೋತ್ತರ ಪದವಿಯನ್ನೂ ಪಡೆದಿದ್ದಾರೆ.

## ಗರ್ಭಿಣಿ ಸಾವಿಗೆ ಹೊಸ ತಿರುವು: 10 ದಿನಗಳ ಬಳಿಕ ಬಯಲಾದ ಅಸಲಿ ಸತ್ಯ


**ಧರ್ಮಪುರಿ**: ಗರ್ಭಿಣಿಯೊಬ್ಬರ ಅನಿರೀಕ್ಷಿತ ಸಾವು ಪೊಲೀಸರ ನಿದ್ರೆಗೆಡಿಸಿತ್ತು. ಆಕೆ ಮೆಟ್ಟಿಲಿನಿಂದ ಜಾರಿ ಬಿದ್ದು ಸಾವನ್ನಪ್ಪಿದ್ದಾಳೆ ಎಂದು ಆಕೆಯ ಗಂಡ ಪೊಲೀಸರಿಗೆ ತಿಳಿಸಿದ್ದ. ಆದರೆ, ಅಸಲಿ ಸಂಗತಿ ಬೇರೆಯೇ ಇತ್ತು. ಧರ್ಮಪುರಿಯಲ್ಲಿ ಈ ತಿಂಗಳ ಆರಂಭದಲ್ಲಿ ಮನೆಯಲ್ಲಿಯೇ ಗರ್ಭಪಾತ (Abortion) ಮಾಡುವಾಗ ಆಕೆ ಸಾವನ್ನಪ್ಪಿದ್ದರು ಎಂಬ ಸಂಗತಿ ಬಯಲಾಗಿದೆ. ಈ ಘಟನೆಯಲ್ಲಿ ಮೂವರನ್ನು ಬಂಧಿಸಲಾಗಿದೆ.

ಎರಿಯೂರು ಬಳಿಯ ಪೂಚೂರಿನ 26 ವರ್ಷದ ಕೆ. ರಮ್ಯಾ ಇಬ್ಬರು ಹೆಣ್ಣುಮಕ್ಕಳ ತಾಯಿಯಾಗಿದ್ದು, ಇತ್ತೀಚೆಗೆ ಮತ್ತೆ ಗರ್ಭಿಣಿಯಾಗಿದ್ದರು. ಡಿಸೆಂಬರ್ 1ರಂದು ಆಕೆ ಮೆಟ್ಟಿಲುಗಳಿಂದ ಬಿದ್ದು ಸಾವನ್ನಪ್ಪಿದ್ದಾರೆ ಎಂದು ಅವರ ಪತಿ ಕಣ್ಣನ್ ತನ್ನ ಸಂಬಂಧಿಕರಿಗೆ ಮಾಹಿತಿ ನೀಡಿದರು. ಆದರೆ, ಆಕೆಯ ಸಾವಿನ ಬಗ್ಗೆ ಕುಟುಂಬಸ್ಥರು ಅನುಮಾನ ವ್ಯಕ್ತಪಡಿಸಿದರು. ಈ ಬಗ್ಗೆ ಎರಿಯೂರು ಪೊಲೀಸರು ಕೇಸ್ ದಾಖಲಿಸಿದ್ದರು. ಧರ್ಮಪುರಿ, ಗರ್ಭಿಣಿಯೊಬ್ಬರ ಅನಿರೀಕ್ಷಿತ ಸಾವು ಪೊಲೀಸರ ನಿದ್ರೆಗೆಡಿಸಿತ್ತು. ಆಕೆ ಮೆಟ್ಟಿಲಿನಿಂದ ಜಾರಿ ಬಿದ್ದು ಸಾವನ್ನಪ್ಪಿದ್ದಾಳೆ ಎಂದು ಆಕೆಯ ಗಂಡ ಪೊಲೀಸರಿಗೆ ತಿಳಿಸಿದ್ದ. ಆದರೆ, ಅಸಲಿ ಸಂಗತಿ ಬೇರೆಯೇ ಇತ್ತು. ಧರ್ಮಪುರಿಯಲ್ಲಿ ಈ ತಿಂಗಳ ಆರಂಭದಲ್ಲಿ ಮನೆಯಲ್ಲಿಯೇ ಗರ್ಭಪಾತ ಮಾಡುವಾಗ ಆಕೆ ಸಾವನ್ನಪ್ಪಿದ್ದರು ಎಂಬ ಸಂಗತಿ ಬಯಲಾಗಿದೆ. ಈ ಘಟನೆಯಲ್ಲಿ ಮೂವರನ್ನು ಬಂಧಿಸಲಾಗಿದೆ.

ಎರಿಯೂರು ಬಳಿಯ ಪೂಚೂರಿನ 26 ವರ್ಷದ ಕೆ. ರಮ್ಯಾ ಇಬ್ಬರು ಹೆಣ್ಣುಮಕ್ಕಳ ತಾಯಿಯಾಗಿದ್ದು, ಇತ್ತೀಚೆಗೆ ಮತ್ತೆ ಗರ್ಭಿಣಿಯಾಗಿದ್ದರು. ಡಿಸೆಂಬರ್ 1ರಂದು ಆಕೆ ಮೆಟ್ಟಿಲುಗಳಿಂದ ಬಿದ್ದು ಸಾವನ್ನಪ್ಪಿದ್ದಾರೆ ಎಂದು ಅವರ ಪತಿ ಕಣ್ಣನ್ ತನ್ನ ಸಂಬಂಧಿಕರಿಗೆ ಮಾಹಿತಿ ನೀಡಿದರು. ಆದರೆ, ಆಕೆಯ ಸಾವಿನ ಬಗ್ಗೆ ಕುಟುಂಬಸ್ಥರು ಅನುಮಾನ ವ್ಯಕ್ತಪಡಿಸಿದರು. ಈ ಬಗ್ಗೆ ಎರಿಯೂರು ಪೊಲೀಸರು ಕೇಸ್ ದಾಖಲಿಸಿದ್ದರು. ಕಣ್ಣನ್ ತನ್ನ ಸಂಬಂಧಿಕರಿಗೆ ರಮ್ಯಾ ಅನಿರೀಕ್ಷಿತವಾಗಿ ಮೆಟ್ಟಿಲುಗಳಿಂದ ಬಿದ್ದು ಸಾವನ್ನಪ್ಪಿದ್ದಾಗಿ ಹೇಳಿದ್ದರು. ನಂತರ, ಆ ಮಹಿಳೆಯ ಕುಟುಂಬ ಮತ್ತು ಸಂಬಂಧಿಕರು ಅದನ್ನು ನಂಬಿ ದುಃಖದಿಂದ ಆಕೆಯ ಅಂತ್ಯಕ್ರಿಯೆಯನ್ನು ನೆರವೇರಿಸಿ ಕಳುಹಿಸಿದರು. ಆದರೆ, ಅವರಿಗೆ ಕಣ್ಣನ್ ಬಗ್ಗೆ ಸ್ವಲ್ಪ ಅನುಮಾನವಿತ್ತು.

ಇದರ ನಂತರ, ಅವರು ತಮ್ಮ ಮಗಳ ಸಾವು ಅನುಮಾನಾಸ್ಪದವಾಗಿದೆ ಎಂದು ಆ ಮಹಿಳೆಯ ಪೋಷಕರು ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದರು. ಆ ದೂರನ್ನು ಸ್ವೀಕರಿಸಿದ ಪೊಲೀಸರು ಪ್ರಕರಣ ದಾಖಲಿಸಿಕೊಂಡು ತನಿಖೆ ಆರಂಭಿಸಿದ್ದರು. ಆರಂಭದಲ್ಲಿ, ಕಣ್ಣನ್ ಇದು ಅಪಘಾತ ಎಂದು ಪೊಲೀಸರಿಗೆ ಮನವರಿಕೆ ಮಾಡಿಕೊಟ್ಟಿದ್ದರು.

## ಯುವಕನಿಗೆ ಹನಿಟ್ರ್ಯಾಪ್ ಆರೋಪ: ಹೋಂಸ್ಟೇಗೆ ಕರೆಸಿ ಹಣಕ್ಕೆ ಡಿಮ್ಯಾಂಡ್



**ಮಡಿಕೇರಿ**: ಫೇಸ್‌ಬುಕ್‌ನಲ್ಲಿ ಪರಿಚಯವಾದ ಯುವತಿ ಭೇಟಿಗಾಗಿ ಮಡಿಕೇರಿಗೆ ಬಂದಿದ್ದ ಮಂಡ್ಯ ಮೂಲದ ಯುವಕನಿಗೆ ನರಕ ದರ್ಶನವಾಗಿದೆ. ಮಡಿಕೇರಿಗೆ ಬಂದಿದ್ದ ಯುವಕನನ್ನ ಖಾಸಗಿ ಹೋಂ ಸ್ಟೇನಲ್ಲಿ ಬಂಧಿಸಿಟ್ಟು ಹಣಕ್ಕಾಗಿ ಬೇಡಿಕೆ ಇಟ್ಟಿದ್ದ ಘಟನೆ ಬೆಳಕಿಗೆ ಬಂದಿದೆ. ಮಂಡ್ಯ ಜಿಲ್ಲೆಯ ಮದ್ದೂರು ಮೂಲದ ಮಹದೇವ್‌ಗೆ ಇತ್ತೀಚೆಗೆ ಫೇಸ್‌ಬುಕ್‌ನಲ್ಲಿ ಯುವತಿಯೊಬ್ಬಳ ಪರಿಚಯವಾಗಿತ್ತು.

ಆಕೆಯ ಭೇಟಿಯಾಗಿ ಮಹದೇವಬ್ ಶುಕ್ರವಾರ ಸಂಜೆ ಮಡಿಕೇರಿಗೆ ಬಂದಿದ್ದಾನೆ. ಒಂಟಿಯಾಗಿ ಬಂದಿದ್ದ ಮಹದೇವ್‌ನನ್ನ ಮಡಿಕೇರಿಯ ಮಂಗಳಾದೇವಿ ನಗರದ ಮನೆಯೊಂದಕ್ಕೆ ಕರೆಸಿಕೊಂಡಿದ್ದಾಳೆ. ಕೆಲ ಕಾಲ ಆತನೊಂದಿಗೆ ಮಾತನಾಡಿ ಡ್ರಿಂಕ್ಸ್ ಕೂಡ ಮಾಡಿ ಮಡಿಕೇರಿಯ ಪ್ರವಾಸಿತಾಣಗಳ ಬಗ್ಗೆ ಮಾಹಿತಿ ನೀಡಿದ್ದಾಳೆ. ಇದೇ ವೇಳೆಯಲ್ಲಿ ಆಕೆಗೊಂದು ಫೋನ್ ಕರೆ ಬಂದಿದೆ. ತಕ್ಷಣ ನನ್ನ ಸಂಬಂಧಿಕರು ಯಾರೋ ಮೃತಪಟ್ಟಿದ್ದಾರೆ ತಾನು ಹೋಗಿ ಬರುತ್ತೇನೆ ಎಂದು ಅಲ್ಲಿಂದ ಹೊರಟಿದ್ದಾಳೆ.

ಅದೇ ಸಂದರ್ಭದಲ್ಲಿ ರೂಮಿಗೆ ಬಂದ ಮೂವರು ಯುವಕರು ತನ್ನ ಬಳಿಯಿದ್ದ ಹಣ ವಸ್ತುಗಳೆಲ್ಲವನ್ನ ಕಿತ್ತುಕೊಂಡು ಹಲ್ಲೆ ನಡೆಸಿದ್ದಾರೆ. ಭಾರೀ ಪ್ರಮಾಣದ ಹಣಕ್ಕೆ ಡಿಮ್ಯಾಂಡ್ ಮಾಡಿದ್ದಾರೆ. ಕೊನೆಗೆ ಮಹದೇವ್ ಮೂವರಿಂದ ತಪ್ಪಿಸಿಕೊಂಡು ಮನೆಯಿಂದ ಹೊರಗೆ ಬಂದಿದ್ದಾನೆ. ಆದ್ರೂ ಮಹದೇವ್‌ನನ್ನು ಬೆನ್ನಟ್ಟಿದ ಮೂವರು ಆಟೋದಲ್ಲಿ ಅಪಹರಣ ಮಾಡಲು ಮುಂದಾಗಿದ್ದಾರೆ. ಅಪಹರಣಕ್ಕೆ ಯತ್ನಿಸಿದ ದೃಶ್ಯಗಳು ಸಿಸಿಟಿವಿ ಕ್ಯಾಮೆರಾದಲ್ಲಿ ಸೆರೆಯಾಗಿವೆ.

ಮೂವರಿಂದ ತಪ್ಪಿಸಿಕೊಂಡ ಮಹದೇವ್, ಮಡಿಕೇರಿ ನಗರ ಠಾಣೆಗೆ ಅರೆಬೆತ್ತಲಾಗಿ ಓಡೋಡಿ ಬಂದು ದೂರು ದಾಖಲಿಸಿದ್ದಾರೆ. ವಿಷಯ ತಿಳಿಯುತ್ತಿದ್ದಂತೆ ಸ್ಥಳಕ್ಕೆ ಪೊಲೀಸರು ಭೇಟಿ ನೀಡುವಷ್ಟರಲ್ಲಿ ಆರೋಪಿಗಳು ಅಲ್ಲಿಂದ ಪರಾರಿಯಾಗಿದ್ದಾರೆ.

**ಹನಿಟ್ರ್ಯಾಪ್ ಶಂಕೆ**

ಮಹದೇವ್ ಹಲ್ಲೆಗೆ ಬಳಸಲಾಗದ ಮಾರಕಾಸ್ತ್ರಗಳನ್ನಪೊಲೀಸರು ವಶಕ್ಕೆಪಡೆದುಕೊಂಡಿದ್ದಾರೆ. ಇದೊಂದು ಹನಿಟ್ರ್ಯಾಪ್ ಎಂಬ ಶಂಕೆ ವ್ಯಕ್ತವಾಗಿದ್ದು, ಪೊಲೀಸರು ತನಿಖೆ ನಡೆಸುತ್ತಿದ್ದಾರೆ. ಇದನ್ನೂ ಓದಿ: ಸೆಕ್ಯೂರಿಟಿ ಗಾರ್ಡ್ ಮೇಲೆ ನಾಯಿ ದಾಳಿ - ಭಯಾನಕ ದೃಶ್ಯ ಸಿಸಿಟಿವಿಯಲ್ಲಿ ಸೆರೆ

**ಮಾಜಿ ಪೊಲೀಸ್ ಕಾನ್ಸ್‌ಟೇಬಲ್ ಪತ್ನಿಯಿಂದ ಕೃತ್ಯ**

ಹಾನಿಟ್ರ್ಯಾ ಪ್ ಪ್ರಕರಣದ ರುವಾರಿ ರಚನಾ ಮಡಿಕೇರಿ ನಗರದ ಅಶೋಕಪುರದ ನಿವಾಸಿಯಾಗಿದ್ದಾಳೆ. ಈಕೆ ಹಲವಾರು ವರ್ಷಗಳ ಹಿಂದೆ ಪೊಲೀಸ್ ಪೇದೆಯೊಂದಿಗೆ ಮದುವೆ ಆಗಿದ್ದಳು. ಈಕೆ ಸಾಕಷ್ಟು ಕುಡಿತದ ಚಟಕ್ಕೆ ಒಳಗಾಗಿದ್ದರಿಂದ ಬೇಸತ್ತ ಗಂಡ ವಿವಾಹ ವಿಚ್ಛೇದನ ನೀಡಿದ್ದರಂತೆ ಎಂದು ಪೊಲೀಸ್ ಮೂಲಗಳಿಂದ ತಿಳಿದು ಬಂದಿದೆ.

ಸುದ್ದಿ ಹಾಗೂ ಜಾಹಿರಾತುಗಳಿಗಾಗಿ ಸಂಪರ್ಕಿಸಿ:
9538786812 / 9880655634

## ಟ್ರಕ್ ಕಂದಕಕ್ಕೆ ಉರುಳಿ 22 ಕಾರ್ಮಿಕರು ಸಾವು



**ಇಟಾನಗರ:** ಅಸ್ಸಾಂನ ಟಿನ್ಸುಕಿಯಾ ಜಿಲ್ಲೆಯಿಂದ ದಿನ ಗೂಲಿ ಕಾರ್ಮಿ ಕರನ್ನು ಕರೆದೊಯ್ಯುತ್ತಿದ್ದ ಟ್ರಕ್ ಇಂದು ಅರುಣಾಚಲ ಪ್ರದೇಶದ ಅಂಜಾವ್ ಜಿಲ್ಲೆಯ ಕಂದಕಕ್ಕೆ ಉರುಳಿ ಕನಿಷ್ಠ 22 ಜನರು ಸಾವನ್ನಪ್ಪಿದ್ದಾರೆ. ಟ್ರಕ್ ಬೆಟ್ಟದ ರಸ್ತೆಯಿಂದ ಜಾರಿ ಸುಮಾರು 1,000 ಅಡಿಗಳಷ್ಟು ಕಡಿದಾದ ಕಮರಿಗೆ ಬಿದ್ದಿದ್ದರಿಂದ ಈ ದುರಂತ ಸಂಭವಿಸಿದೆ. ಟಿನ್ಸುಕಿಯಾದ ಗೆಲಾಪುಖುರಿ ಟೀ ಎಸ್ಟೇಟ್‌ನ ಕಾರ್ಮಿಕರು ಕೆಲಸಕ್ಕಾಗಿ ಹಯುಲಿಯಾಂಗ್‌ಗೆ ಪ್ರಯಾಣಿಸುತ್ತಿದ್ದಾಗ ಈ ಅಪಘಾತ ನಡೆದಿದೆ. ಇನ್ನೂ ಎಲ್ಲ ಮೃತದೇಹಗಳನ್ನು ಹೊರತೆಗೆದಿಲ್ಲ. ಆದರೆ ಅವರೆಲ್ಲರೂ ಮೃತರಾಗಿದ್ದಾರೆ ಎನ್ನಲಾಗಿದೆ.

ಗುಡ್ಡಗಾಡು ಪ್ರದೇಶದ ಮೂಲಕ ಹೋಗುತ್ತಿದ್ದ ಟ್ರಕ್ ನಿಯಂತ್ರಣ ತಪ್ಪಿ ಆಳವಾದ ಕಂದಕಕ್ಕೆ ಬಿದ್ದಾಗ ಈ ಅಪಘಾತ ಸಂಭವಿಸಿದೆ. ರಕ್ಷಣಾ ತಂಡಗಳು ತಕ್ಷಣ ಸ್ಥಳಕ್ಕೆ ಧಾವಿಸಿದವು. ಸ್ಥಳೀಯ ಅಧಿಕಾರಿಗಳು ಮತ್ತು ವಿಪತ್ತು ನಿರ್ವಹಣಾ ತಂಡಗಳು ಆ ಟ್ರಕ್‌ನಲ್ಲಿದ್ದವರನ್ನು ಹುಡುಕಲು ಆ ಸ್ಥಳಕ್ಕೆ ತಲುಪಿದ್ದಾರೆ. ಮತ್ತೊಂದು ಘಟನೆ ನಡೆದಿತ್ತು.

## ಇಬ್ಬರು ಗಂಡಂದಿರ ಮುದ್ದಿನ ಮಡದಿ ಪೊಲೀಸಪ್ಪನ ಜತೆ ಪರಾರಿ

**ಬೆಂಗಳೂರು:** ಅತೀ ಹೆಚ್ಚು ಅಕ್ರಮ ಸಂಬಂಧ ಪ್ರಕರಣಗಳು ಪತ್ತೆಯಾಗಿದೆ ಎಂದು ಇತ್ತೀಚೆಗೆ ಗ್ಲೀಡನ್ ನೀಡಿದ ವರದಿಯಲ್ಲಿ ಹೇಳಲಾಗಿತ್ತು. ಅಕ್ರಮ ಸಂಬಂಧದಲ್ಲಿ ದೇಶದಲೇ ಬೆಂಗಳೂರು ನಂಬರ್ ಒನ್ ಎಂದು ಈ ವರದಿ ಹೇಳಿದೆ. ಇದೀಗ ಇದಕ್ಕೆ ಸಾಕ್ಷಿ ಎಂಬಂತೆ ಬೆಂಗಳೂರಿನಲ್ಲಿ ಅಕ್ರಮ ಸಂಬಂಧ ಪ್ರಕರಣವೊಂದು ಪತ್ತೆಯಾಗಿದೆ. ಇದು ಮಾತ್ರವಲ್ಲದೆ ರಾಜ್ಯದ ಬೇರೆ ಬೇರೆ ಜಿಲ್ಲೆಗಳಲ್ಲೂ ಅಕ್ರಮ ಸಂಬಂಧದ ಗಾಳಿ ಬಿಸಿದೆ. 12 ವರ್ಷದ ಮಗ ಇದ್ರೂ ಗೃಹಣಿಯೊಬ್ಬಳು ಪೊಲೀಸಪ್ಪನ ಜೊತೆ ಪರಾರಿಯಾಗಿರುವ ಘಟನೆ ಬೆಳಕಿದೆ ಬಂದಿದೆ.

ಮೈಸೂರು ಮೂಲದ ಮೋನಿಕಾ ಎಂಬ ಮಹಿಳೆ ಉತ್ತರ ಕರ್ನಾಟಕ ಮೂಲದ ಪೊಲೀಸ್ ಕಾನ್ಸ್ ಟೇಬಲ್ ರಾಘವೇಂದ್ರನ ಜತೆಗೆ ಪರಾರಿಯಾಗಿದ್ದಾಳೆ. ಈ ಹಿಂದೆ ಮೋನಿಕಾ ಎರಡು ಮದುವೆಯಾಗಿದ್ದು, ಇದೀಗ ಪೊಲೀಸ್ ಕಾನ್ಸ್ ಟೇಬಲ್ ಜತೆಗೆ ಸಂಬಂಧ ಹೊಂದಿದ್ದಾಳೆ ಎಂದು ಹೇಳಲಾಗಿದೆ. ಮೊದಲನೇ ಗಂಡನ ಬಿಟ್ಟು, ಎರಡನೇ ಮದುವೆಯಾಗಿದ್ದ ಮೋನಿಕಾ, ಸ್ವಲ್ಪ ದಿನ ಸಂಸಾರ ನಡೆಸಿ, ಇದೀಗ ಎರಡನೇ ಗಂಡನಿಗೂ ಕೈಕೊಟ್ಟಿದ್ದಾಳೆ. ಜೂನ್‌ನಲ್ಲಿ ಹೆಚ್ ಎಸ್ ಆರ್ ಠಾಣೆಯ ಹೊಯ್ಸಳ ಡ್ರೈವರ್ ರಾಘವೇಂದ್ರ ಮತ್ತು ಮೋನಿಕಾ ಇನ್ಸ್ಟಾಗ್ರಾಮ್ ನಲ್ಲಿ ಪರಿಚಯ ಮಾಡಿಕೊಂಡಿದ್ದಾರೆ.

ಪರಿಚಯದ ನಂತರ ಫೋನ್ ನಂಬರ್ ಎಕ್ಸ್ ಚೆಂಜ್ ಮಾಡಿಕೊಂಡು, ಪ್ರತಿದಿನ ಮಾತನಾಡುತ್ತಿದ್ದರು ಎಂದು ಹೇಳಲಾಗಿದೆ. ಈ ಸಲುಗೆ ಇಬ್ಬರ ನಡುವೆ ಪ್ರೀತಿಗೆ ತಿರುಗಿದೆ. ಮೂರು ತಿಂಗಳ ನಂತರ ಮೋನಿಕಾ ಎರಡನೇ ಗಂಡನ ವಿರುದ್ಧ ಪೊಲೀಸ್ ಠಾಣೆಯಲ್ಲಿ ದೂರು ನೀಡಿದ್ದಾಳೆ. ನನ್ನ ಜೀವನ ರೂಪಿಸಿಕೊಳ್ಳಲು ನಾನು ಹೋಗ್ತಿದ್ದೇನೆ ನನ್ನ ಗಂಡನ ಕರೆಸಿ ಬುದ್ದಿ ಹೇಳಿ ಎಂದು ದೂರಿನಲ್ಲಿ ಹೇಳಿದ್ದಾಳೆ. ಮೋನಿಕಾ ದೂರು ನೀಡಿದ ಬೆನ್ನಲ್ಲೆ ಚಂದ್ರಲೇಔಟ್ ಪೊಲೀಸರು ಗಂಡನಿಗೆ ಕರೆ ಮಾಡಿ ಕರೆಸಿಕೊಂಡಿದ್ದಾರೆ.

ಇನ್ನು ಗಂಡ ಪೊಲೀಸ್ ಠಾಣೆಗೆ ಹೋಗುತ್ತಿದ್ದಂತೆ ಮೋನಿಕಾ ಮನೆಯಿಂದ 160 ಗ್ರಾಂ ಚಿನ್ನಾಭರಣ, 1.80 ಲಕ್ಷ ಹಣ ಜತೆಗೆ ಎಸ್ಕೇಪ್ ಆಗಿದ್ದಾಳೆ. ಪೊಲೀಸ್ ಠಾಣೆಯಲ್ಲಿದ್ದ ಗಂಡನ್ನು ಪೊಲೀಸರು ವಿಚಾರಣೆ ನಡೆಸಿದ್ದಾರೆ. ತಕ್ಷಣ ಪೊಲೀಸ್ ಠಾಣೆಯಿಂದಲೇ ಮೋನಿಕಾನಿಗೆ ಫೋನ್ ಮಾಡಿದ್ದಾನೆ. ಆದರೆ ಮೋನಿಕಾ ಫೋನ್ ಎತ್ತಿಲ್ಲ.

ಈ ಬಗ್ಗೆ ಅನುಮಾನ ಬಂದು ಮೋನಿಕಾನ ಗಂಡ ಚಂದ್ರಲೇಔಟ್ ಪೊಲೀಸ್ ಠಾಣೆಯಲ್ಲಿ ದೂರು ನೀಡಿದ್ದಾನೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

## ಕಳ್ಳತನ ಕೇಸ್‌ಗಳ ಲಿಸ್ಟ್‌ನಲ್ಲಿ ಬೆಂಗಳೂರು ಏರ್‌ಪೋರ್ಟ್‌ಗೆ ಮೊದಲನೇ ಸ್ಥಾನ



**ಬೆಂಗಳೂರು:** ದೇಶದ ಅತ್ಯಂತ ಆಧುನಿಕ ಮತ್ತು ಬಿಡುವಿಲ್ಲದ ವಿಮಾನ ನಿಲ್ದಾಣಗಳಲ್ಲಿ ಒಂದಾದ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ (ಕೆಐಎ) ಇತ್ತೀಚಿನ ದಿನಗಳಲ್ಲಿ ಕಳ್ಳತನ ಪ್ರಕರಣಗಳಿಂದ ಸುದ್ದಿಯಲ್ಲಿದೆ. 2025ರ ಜನವರಿ 1ರಿಂದ ನವೆಂಬರ್ 27ರವರೆಗೆ ದೇಶದ ವಿವಿಧ ವಿಮಾನ ನಿಲ್ದಾಣಗಳಲ್ಲಿ ಭದ್ರತಾ ತಪಾಸಣೆ ಮತ್ತು ಸರಕು ನಿರ್ವಹಣೆ ವೇಳೆ ಒಟ್ಟು 9 ಕಳ್ಳತನ ಪ್ರಕರಣಗಳು ವರದಿಯಾಗಿವೆ. ಇದರಲ್ಲಿ ಬೆಂಗಳೂರಿನ ಕೆಐಎಯಲ್ಲಿ ಮಾತ್ರ 4 ಪ್ರಕರಣಗಳು ನಡೆದಿವೆ. ಉಳಿದಂತೆ ದೆಹಲಿ, ಮುಂಬೈ, ಹೈದರಾಬಾದ್, ನಾಗಪುರ ಮತ್ತು ರಾಜ್‌ಕೋಟ್ ವಿಮಾನ ನಿಲ್ದಾಣಗಳಲ್ಲಿ ತಲಾ ಒಂದು ಪ್ರಕರಣ ವರದಿಯಾಗಿದೆ. ಈ ಮೂಲಕ ಬೆಂಗಳೂರು ವಿಮಾನ ನಿಲ್ದಾಣ ದೇಶದಲ್ಲಿ ಕಳ್ಳತನ ಪ್ರಕರಣಗಳಲ್ಲಿ ಮೊದಲ ಸ್ಥಾನ ಪಡೆದಿದೆ.

ಲೋಕಸಭೆಯಲ್ಲಿ ಕಾಂಗ್ರೆಸ್ ಸಂಸದ ಗುರುಜೀತ್ ಸಿಂಗ್ ಔಜ್ಲಾ ಅವರ ಪ್ರಶ್ನೆಗೆ ಉತ್ತರಿಸಿದ ಕೇಂದ್ರ ನಾಗರಿಕ ವಿಮಾನಯಾನ ರಾಜ್ಯ ಸಚಿವ ಮುರಳೀಧರ ಮೊಹೋಲ್ ಅವರು ಈ ಅಂಕಿಅಂಶಗಳನ್ನು ಬಹಿರಂಗಪಡಿಸಿದ್ದಾರೆ. ಈ ಪ್ರಕರಣಗಳು ಮುಖ್ಯವಾಗಿ ಪ್ರಯಾಣಿಕರ ಭದ್ರತಾ ತಪಾಸಣೆ, ಸರಕು ನಿರ್ವಹಣೆ ಮತ್ತು ಬ್ಯಾಗೇಜ್ ಮೇಕಪ್ ಏರಿಯಾ (ಬಿಎಂಎ) ಗಳಲ್ಲಿ ನಡೆದಿವೆ. ಇಂತಹ ಘಟನೆಗಳು ಕಂಡುಬಂದ ತಕ್ಷಣ ದೂರು ದಾಖಲಾಗುತ್ತದೆ ಮತ್ತು ಸ್ಥಳೀಯ ಪೊಲೀಸರು ತನಿಖೆ ನಡೆಸುತ್ತಾರೆ ಎಂದು ಸಚಿವರು ತಿಳಿಸಿದ್ದಾರೆ.

ಕಳ್ಳತನ ಪ್ರಕರಣಗಳು ಕಾನೂನು ಮತ್ತು ಸುವ್ಯವಸ್ಥೆಯ ವಿಷಯವಾಗಿರುವುದರಿಂದ ರಾಜ್ಯ ಸರ್ಕಾರದ ಅಧಿಕಾರ ವ್ಯಾಪ್ತಿಗೆ ಬರುತ್ತದೆ ಎಂದೂ ಅವರು ಸ್ಪಷ್ಟಪಡಿಸಿದ್ದಾರೆ. ಭಾರತದ ವಿಮಾನ ನಿಲ್ದಾಣಗಳಲ್ಲಿ ಭದ್ರತೆಯನ್ನು ಕಾಯ್ದುಕೊಳ್ಳಲು ನಾಗರಿಕ ವಿಮಾನಯಾನ ಭದ್ರತಾ ಬ್ಯೂರೋ (ಬಿಸಿಎಎಸ್) ಕಟ್ಟುನಿಟ್ಟಿನ ನಿಯಮಗಳನ್ನು ಜಾರಿಗೊಳಿಸಿದೆ. ವಿಮಾನ ನಿಲ್ದಾಣದ ಟರ್ಮಿನಲ್ ಕಟ್ಟಡದ ಎಲ್ಲಾ ಪ್ರದೇಶಗಳು ಸಿಸಿಟಿವಿ ಕ್ಯಾಮೆರಾಗಳ ಕಣ್ಗಾವಲಿನಲ್ಲಿರಬೇಕು ಎಂದು ಕಡ್ಡಾಯಗೊಳಿಸಲಾಗಿದೆ. ಅನುಮಾನಾಸ್ಪದ ಚಟುವಟಿಕೆಗಳನ್ನು ಗಮನಿಸಲು ಕೇಂದ್ರ ಕೈಗಾರಿಕಾ ಭದ್ರತಾ ಪಡೆ (ಸಿಐಎಸ್‌ಎಫ್) ಮತ್ತು ಏರ್‌ಲೈನ್ ಭದ್ರತಾ ಸಿಬ್ಬಂದಿಗಳ ನಡುವೆ ಸಹಕಾರವಿದೆ. ಗ್ರೌಂಡ್ ಸಿಬ್ಬಂದಿಗಳನ್ನು ಕಡ್ಡಾಯವಾಗಿ ತಪಾಸಣೆಗೊಳಪಡಿಸುವುದು, ಬ್ಯಾಗೇಜ್ ಹ್ಯಾಂಡ್ಲಿಂಗ್ ಪ್ರದೇಶಗಳಲ್ಲಿ ಏರ್‌ಲೈನ್ ಭದ್ರತಾ ಸಿಬ್ಬಂದಿ ನಿಯೋಜನೆ ಮತ್ತು ಪೆಟ್ರೋಲಿಂಗ್ ಹೆಚ್ಚಿಸುವುದು ಸೇರಿದಂತೆ ಹಲವು ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ.

ಪ್ರಯಾಣಿಕರು ಕಳ್ಳತನದ ಬಗ್ಗೆ ದೂರು ನೀಡಲು ಸಿಐಎಸ್‌ಎಫ್ ಸಹಾಯ ಕೌಂಟರ್‌ಗಳನ್ನು ಸ್ಥಾಪಿಸಲಾಗಿದೆ. ಇದಲ್ಲದೆ, ಸಿಸಿಟಿವಿ ದೃಶ್ಯಗಳನ್ನು ನಿರಂತರವಾಗಿ ಮೇಲ್ವಿಚಾರಣೆ ಮಾಡಲು ವಿಶೇಷ ತರಬೇತಿ ಪಡೆದ ಸಿಬ್ಬಂದಿ ನಿಯೋಜಿತರಾಗಿದ್ದಾರೆ. ಕೇಂದ್ರ ಸರ್ಕಾರದ ಸಿಪಿಜಿಆರ್‌ಎಎಂಎಸ್ ಪೋರ್ಟಲ್, ಇನ್‌ಗ್ರಾಮ್ ಪೋರ್ಟಲ್ ಮತ್ತು ಏರ್‌ಸೇವಾ ಮೊಬೈಲ್ ಆಪ್/ವೆಬ್ ಪೋರ್ಟಲ್ ಮೂಲಕ ಪ್ರಯಾಣಿಕರು ದೂರುಗಳನ್ನು ಸಲ್ಲಿಸಬಹುದು. ಲಗೇಜ್ ತಪ್ಪು ನಿರ್ವಹಣೆ ಕುರಿತ ದೂರುಗಳನ್ನೂ ಇಲ್ಲಿ ದಾಖಲಿಸಬಹುದು.

ಬೆಂಗಳೂರು ವಿಮಾನ ನಿಲ್ದಾಣದಲ್ಲಿ ಪ್ರಯಾಣಿಕರ ಸಂಖ್ಯೆ ದಿನದಿಂದ ದಿನಕ್ಕೆ ಹೆಚ್ಚುತ್ತಿರುವುದು ಮತ್ತು ಅಂತಾರಾಷ್ಟ್ರೀಯ ಮಟ್ಟದ ಸೌಲಭ್ಯಗಳಿದ್ದರೂ ಕಳ್ಳತನ ಪ್ರಕರಣಗಳು ಹೆಚ್ಚಾಗಿರುವುದು ಆತಂಕಕಾರಿ. ಈ 4 ಪ್ರಕರಣಗಳು ಸಾಕಷ್ಟು ಭದ್ರತಾ ವ್ಯವಸ್ಥೆಗಳಿದ್ದರೂ ಸಣ್ಣ ಲೋಪಗಳನ್ನು ಬಯಲುಮಾಡಿವೆ. ಪ್ರಯಾಣಿಕರು ತಮ್ಮ ವಸ್ತುಗಳ ಮೇಲೆ ಹೆಚ್ಚಿನ ಗಮನ ಹರಿಸಬೇಕು. ಅನುಮಾನಾಸ್ಪದ ಚಟುವಟಿಕೆಗಳನ್ನು ತಕ್ಷಣ ವರದಿ ಮಾಡಬೇಕು ಎಂದು ತಜ್ಞರು ಸಲಹೆ ನೀಡುತ್ತಾರೆ.

## 13 ವರ್ಷದ ಬಾಲಕಿಯಿಂದ ಬಾಂಬ್ ಬೆದರಿಕೆ



**ಕೋಲಾರ:** ಜಿಲ್ಲಾಧಿಕಾರಿ ಕಚೇರಿ ಮತ್ತು ಬೀದರ್ DC ಕಚೇರಿಗೆ ಒಂದೇ ಸಮಯದಲ್ಲಿ ಅನಾಮಧೇಯ ಇಮೇಲ್ ಬಂದಿತ್ತು. "ನಿಮ್ಮ ಕಚೇರಿಯಲ್ಲಿ RDX ಬಾಂಬ್ ಇದೆ, ಸ್ಫೋಟಗೊಳ್ಳಲಿದೆ" ಎಂದು ಇಮೇಲ್ ಬಂದಿದ್ದು.

ಈ ಒಂದು ಮೇಲ್ ಸಾಕಾಗಿತ್ತು ಎಂಟೈರ್ ಜಿಲ್ಲಾಡಳಿತವನ್ನು ತಲ್ಲಣ ಮಾಡಲು. ಬಾಂಬ್ ಸ್ಕ್ವಾಡ್, ಶ್ವಾನದಳ, ಅಗ್ನಿಶಾಮಕ ದಳ, ಡಾಗ್ ಸ್ಕ್ವಾಡ್ ಎಲ್ಲವೂ ಒಟ್ಟಿಗೆ ಧಾವಿಸಿದ್ದವು. ಜಿಲ್ಲಾಧಿಕಾರಿ ಡಾ. ಎಂ.ಆರ್. ರವಿ ಮತ್ತು SP ನಿಖಿಲ್ ಅವರೇ ಸ್ಥಳಕ್ಕೆ ಬಂದು ಮೇಲ್ವಿಚಾರಣೆ ನಡೆಸಿದರು. ಸಿಬ್ಬಂದಿಯನ್ನು ಸಂಪೂರ್ಣವಾಗಿ ಹೊರಗೆ ಕಳುಹಿಸಿ, ಇಂಚಿಂಚೂ ತಪಾಸಣೆ ನಡೆಸಲಾಯಿತು. ಬಂಗಾರಪೇಟೆ ಶಾಸಕ ಎಸ್.ಎನ್. ನಾರಾಯಣಸ್ವಾಮಿ ಅವರು VC ಚೇಂಬರ್‌ನಲ್ಲಿ ಸಭೆ ನಡೆಸುತ್ತಿದ್ದ ಸಮಯದಲ್ಲೇ ಈ ಗೊಂದಲ ಸೃಷ್ಟಿಯಾಗಿತ್ತು. ಆತಂಕದ ವಾತಾವರಣದಲ್ಲಿ ಕೆಲವೇ ಗಂಟೆಗಳಲ್ಲಿ ಪೊಲೀಸರ ತ್ವರಿತ ತನಿಖೆಯಿಂದ ಬೆದರಿಕೆಯ ಹಿಂದಿನ ಸತ್ಯ ಬಯಲಾಯಿತು ಮತ್ತು ಆ ಸತ್ಯ ಕೇಳಿ ಎಲ್ಲ ಅಧಿಕಾರಿಗಳೂ ಶಾಕ್.

ಬಾಂಬ್ ಬೆದರಿಕೆ ಕಳಿಸಿದ್ದು 13 ವರ್ಷದ ಬಾಲಕಿ. ತಮಿಳುನಾಡಿನ ಮೈಲಾಪುರ ಪ್ರದೇಶದ 13 ವರ್ಷದ ಬಾಲಕಿಯೊಬ್ಬಳೇ ಈ ಇಮೇಲ್ ಕಳುಹಿಸಿದ್ದಾಳೆ ಎಂಬುದು ತನಿಖೆಯಲ್ಲಿ ಬೆಳಕಿಗೆ ಬಂದಿದೆ. ಆದರೆ ಆಕೆಯ ಉದ್ದೇಶ ಏನೆಂದರೆ ತನಗೆ ನಡೆದಿರುವ ಲೈಂಗಿಕ ದೌರ್ಜನ್ಯದ ಬಗ್ಗೆ ಸಮಾಜದ ಗಮನ ಸೆಳೆಯುವುದು.

ಇಮೇಲ್‌ನಲ್ಲಿ ಮೊದಲು "RDX ಬಾಂಬ್ ಇದೆ" ಎಂದು ಬರೆದು, ನಂತರ ತನ್ನ ಮೇಲೆ ನಡೆದಿರುವ ಅತ್ಯಾಚಾರ ಮತ್ತು ದೌರ್ಜನ್ಯದ ಬಗ್ಗೆ ವಿವರವಾಗಿ ಬರೆದಿದ್ದಾಳೆ. "ಯಾರೂ ನನ್ನ ಮಾತು ಕೇಳುತ್ತಿಲ್ಲ, ನನ್ನ ದನಿ ಕೇಳಿಸಿಕೊಳ್ಳಲು ಇದೇ ದಾರಿ ಉಳಿದಿದೆ" ಎಂಬ ರೀತಿಯಲ್ಲಿ ಆಕೆ ಬರೆದಿದ್ದಾಳೆ ಎನ್ನಲಾಗಿದೆ.

ಪೊಲೀಸರು ತಕ್ಷಣ ತಮಿಳುನಾಡು ಪೊಲೀಸರ ಸಂಪರ್ಕಕ್ಕೆ ಹೋಗಿ ಬಾಲಕಿಯನ್ನು ಪತ್ತೆಹಚ್ಚಿ, ಆಕೆಯನ್ನು ಸುರಕ್ಷಿತವಾಗಿ ಕೌನ್ಸೆಲಿಂಗ್‌ಗೆ ಒಳಪಡಿಸಿದ್ದಾರೆ. ಬಾಲಕಿಯ ಕುಟುಂಬದೊಂದಿಗೆ ಮಾತನಾಡಿ, ಆಕೆಯ ಮೇಲೆ ನಡೆದ ದೌರ್ಜನ್ಯದ ಬಗ್ಗೆ ಪ್ರಕರಣ ದಾಖಲಿಸಿ ತನಿಖೆ ಆರಂಭಿಸಲಾಗಿದೆ.

ಕೋಲಾರ SP ನಿಖಿಲ್ ಅವರು ಮಾಧ್ಯಮಗಳಿಗೆ ತಿಳಿಸಿದ್ದು: "ಇದು ನಿಜವಾದ ಬಾಂಬ್ ಬೆದರಿಕೆ ಅಲ್ಲ. ದೃಢವಾಗಿ ತನಿಖೆ ನಡೆಸಿದ್ದೇವೆ. ಆದರೆ ಈ ಬಾಲಕಿಯ ದನಿ ಕೇಳಿಸಿಕೊಳ್ಳಲು ಆಕೆ ಈ ರೀತಿ ಮಾಡಿದ್ದಾಳೆ ಎಂಬುದು ತುಂಬಾ ದುಃಖದ ಸಂಗತಿ. ಆಕೆಗೆ ಎಲ್ಲ ರೀತಿಯ ಸಹಾಯ ಮಾಡಲಾಗುವುದು."

ಒಟ್ಟಾರೆಯಲ್ಲಿ, ಬಾಂಬ್ ಎಂಬ ಆತಂಕ ಕೆಲವೇ ಗಂಟೆಗಳಲ್ಲಿ ತಣ್ಣಗಾಯಿತು. ಆದರೆ ಒಂದು 13 ವರ್ಷದ ಬಾಲಕಿಯ ದನಿ ಕೇಳಿಸಿಕೊಳ್ಳಲು ಆಕೆಗೆ ಇಂತಹ ಅತಿ ಧಾರುಣ ಹೆಜ್ಜೆ ಇಡಬೇಕಾಯಿತು ಎಂಬುದು ಸಮಾಜಕ್ಕೆ ದೊಡ್ಡ ಪ್ರಶ್ನೆಯಾಗಿ ಉಳಿದಿದೆ.

## 77 ವರ್ಷಗಳ ಬಳಿಕ ಪಾಕ್‌ನಲ್ಲೂ ಸಂಸ್ಕೃತ ಪಾಠ: ಲಾಹೋರ್ ವಿಶ್ವವಿದ್ಯಾಲಯದಲ್ಲಿ ಮೊದಲ ಬಾರಿ ತರಗತಿ ಆರಂಭ

1947ರ ದೇಶವಿಭಜನೆಯ ನಂತರ ಪಾಕಿಸ್ತಾನದ ಯಾವುದೇ ಶೈಕ್ಷಣಿಕ ಸಂಸ್ಥೆಯಲ್ಲಿ ಅಧಿಕೃತವಾಗಿ ಸಂಸ್ಕೃತ ಕಲಿಸಲಾಗಿರಲಿಲ್ಲ. ಆದರೆ ಈಗ ಆ ಇತಿಹಾಸ ಬದಲಾಗಿದೆ. ಪಾಕಿಸ್ತಾನದ ಪ್ರತಿಷ್ಠಿತ ಲಾಹೋರ್ ಯೂನಿವರ್ಸಿಟಿ ಆಫ್ ಮ್ಯಾನೇಜ್‌ಮೆಂಟ್ ಸೈನ್ಸಸ್ ಇದೇ ಡಿಸೆಂಬರ್ ತಿಂಗಳಿನಿಂದ ಸಂಸ್ಕೃತ ಭಾಷೆಯ ಅಧಿಕೃತ ಕೋರ್ಸ್ ಆರಂಭಿಸಿದೆ.

ಇದು ಪಾಕಿಸ್ತಾನದ ಯಾವುದೇ ವಿಶ್ವವಿದ್ಯಾಲಯದಲ್ಲಿ ಸ್ವಾತಂತ್ರ್ಯೋತ್ತರ ಕಾಲದಲ್ಲಿ ಸಂಸ್ಕೃತವನ್ನು ಕಲಿಸುತ್ತಿರುವ ಮೊದಲ ಘಟನೆ. ಲಾಹೋರ್ ಯೂನಿವರ್ಸಿಟಿ ಆಫ್ ಮ್ಯಾನೇಜ್‌ಮೆಂಟ್ ಸೈನ್ಸಸ್ ಮೊದಲು ಪ್ರಾಯೋಗಿಕವಾಗಿ ವಾರಾಂತ್ಯದಲ್ಲಿ ಸಂಸ್ಕೃತ ತರಗತಿಗಳನ್ನು ಆರಂಭಿಸಿತ್ತು. ಆದರೆ ವಿದ್ಯಾರ್ಥಿಗಳು, ಪ್ರಾಧ್ಯಾಪಕರು ಮತ್ತು ಸಾರ್ವಜನಿಕರಿಂದ ಬಂದಿರುವ ಅಭೂತಪೂರ್ವ ಸ್ಪಂದನೆ ನೋಡಿ ವಿಶ್ವವಿದ್ಯಾಲಯ ಆಶ್ಚರ್ಯಚಕಿತವಾಯಿತು. ಈ ಯಶಸ್ಸಿನ ನಂತರ ಸಂಸ್ಕೃ ತವನ್ನು ಪೂರ್ಣಪ್ರಮಾಣದ ಕ್ರೆಡಿಟ್ ಕೋರ್ಸ್ ಆಗಿ ಪರಿಚಯಿಸಲು



ನಿರ್ಧರಿಸಲಾಯಿತು.

ಭಾಷಾ ವಿಭಾಗದ ನಿರ್ದೇಶಕ ಪ್ರೊ. ಅಲಿ ಉಸ್ಮಾನ್ ಖಾಸ್ಮಿ ಅವರು ಹೇಳುತ್ತಾರೆ: "ಜನರ ಪ್ರತಿಕ್ರಿಯೆ ನೋಡಿ ನಮಗೇ ಆಶ್ಚರ್ಯವಾಯಿತು. ಸಂಸ್ಕೃತವು ಜಗತ್ತಿನ ಅತ್ಯಂತ ಪುರಾತನ ಮತ್ತು ವೈಜ್ಞಾನಿಕ ಭಾಷೆ. ದಕ್ಷಿಣ ಏಷ್ಯಾದ ಸಾಂಸ್ಕೃತಿಕ ಪರಂಪರೆಯೊಂದಿಗೆ ಮತ್ತೆ ಸಂಪರ್ಕ ಜೋಡಿಸುವ ಉದ್ದೇಶದಿಂದ ಈ ಕೋರ್ಸ್ ಆರಂಭಿಸಿದ್ದೇವೆ. ಮುಂದಿನ 2-3 ವರ್ಷಗಳಲ್ಲಿ ವಿದ್ಯಾರ್ಥಿಗಳ ಸಂಖ್ಯೆ ಗಣನೀಯವಾಗಿ ಹೆಚ್ಚಲಿದೆ ಎಂಬ ವಿಶ್ವಾಸ ನಮಗಿದೆ. 2027ರ ವೇಳೆಗೆ ಸಂಸ್ಕೃತವನ್ನು ಪೂರ್ಣಾವಧಿ ವರ್ಷಪೂರ್ತಿ ಕೋರ್ಸ್ ಆಗಿ ಕಲಿಸುವ ಗುರಿ ಇದೆ." LUMS ತನ್ನ ಅಧಿಕೃತ ವೆಬ್‌ಸೈಟ್‌ನಲ್ಲಿ ಬರೆದಿದೆ:

ಸಂಸ್ಕೃತವು ಜಗತ್ತಿನ ಅತ್ಯಂತ ಪುರಾತನ ಮತ್ತು ಅತಿ ಪ್ರಭಾವಶಾಲಿ ಶಾಸ್ತ್ರೀಯ ಭಾಷೆಗಳಲ್ಲಿ ಒಂದು. 1947ರ ವಿಭಜನೆಯ ನಂತರ ಪಾಕಿಸ್ತಾನದಲ್ಲಿ ಔಪಚಾರಿಕವಾಗಿ ಸಂಸ್ಕೃತ ಕಲಿಕೆ ನಡೆದಿರಲಿಲ್ಲ. ಈಗ LUMS ತರಗತಿಗಳಲ್ಲಿ ಸಂಸ್ಕೃತ ಮತ್ತೆ ಕೇಳಿಬರುತ್ತಿರುವುದು ದಕ್ಷಿಣ ಏಷ್ಯಾದ ಸಾಂಸ್ಕೃತಿಕ ಪರಂಪರೆಯೊಂದಿಗೆ ಮರುಸಂಪರ್ಕ ಸಾಧಿಸುವ ನವೀನ ಆರಂಭವಾಗಿದೆ."


"77 ವರ್ಷಗಳ ನಂತರ ನೆರೆಯ ದೇಶದಲ್ಲಿ ಸಂಸ್ಕೃತ ಮತ್ತೆ ಜೀವಂತವಾಗಿದೆ, ಇದಕ್ಕಿಂತ ದೊಡ್ಡ ಸಾಂಸ್ಕೃತಿಕ ಜಯವಾದರೂ ಏನು?" ಎಂಬ ಪ್ರತಿಕ್ರಿಯೆಗಳು ಕೇಳಿಬರುತ್ತಿವೆ.

## ನಿರ್ದೇಶಕ ರಿಕ್ಕಿ ಕೇಜ್ ಮನೆಯಲ್ಲಿ ಕಳ್ಳತನ

ಬೆಂಗಳೂರು:ಸಂಗೀತ ನಿರ್ದೇಶಕ ರಿಕ್ಕಿ ಕೇಜ್ ಅವರ ಮನೆಯಲ್ಲಿ ಕಳ್ಳತನವಾಗಿದೆ. ಮನೆಯ ಸಂಪ್‌ನ ಮುಚ್ಚಳ ಕದ್ದಿದ್ದು, ಈ ಕುರಿತು ರಿಕ್ಕಿ ಅವರು ಎಕ್ಸ್ ಖಾತೆಯಲ್ಲಿ ಬೆಂಗಳೂರಿಗೆ ಪೊಲೀಸರಿಗೆ ಟ್ಯಾಗ್ ಮಾಡಿ ದೂರು ನೀಡಿದ್ದಾರೆ. ಸಂಪ್‌ನ ಮುಚ್ಚಳ ಕದಿಯುತ್ತಿರುವ ಸಿಸಿಟಿವಿ ದೃಶ್ಯಗಳನ್ನು ರಿಕ್ಕಿ ಕೇಜ್ ಅವರು ತಮ್ಮ ಎಕ್ಸ್ ಖಾತೆಯಲ್ಲಿ ಹಂಚಿಕೊಂಡಿದ್ದಾರೆ. ಝೊಮ್ಯಾಟೋ ಡೆಲಿವರಿ ಬಾಯ್ ಮನೆಯ ಒಳಗೆ ಬಂದು ಕಳ್ಳತನ ಮಾಡಿದ್ದಾರೆ ಎಂದು ಅನುಮಾನ ವ್ಯಕ್ತಪಡಿಸಿದ್ದಾರೆ.

ಇಬ್ಬರು ಯುವಕರು ಬೈಕ್‌ನಲ್ಲಿ ಬಂದಿದ್ದು, ಆ ಪೈಕಿ ಓರ್ವ ಮನೆಯ ಗೇಟ್ ಒಳಬಂದಿದ್ದಾನೆ. ಕೂಡಲೇ ಸಂಪ್‌ನ ಮೇಲಿರುವ ಕಬ್ಬಿಣದ ಮುಚ್ಚಳವನ್ನು ಎತ್ತಿಕೊಂಡು, ಗೇಟ್‌ನ ಹೊರಗೆ ಹೋಗಿ ಬೈಕ್‌ನಲ್ಲಿ ಇಟ್ಟುಕೊಂಡು ಎಸ್ಕೇಪ್ ಆಗಿದ್ದಾರೆ. ಈ ವೇಳೆ ಬೈಕ್ ಮೇಲಿಂದ ಬ್ಯಾಗ್‌ವೊಂದು ಬಿದ್ದಿದ್ದು, ಕೆಂಪು ಬಣ್ಣದ ಫುಡ್ ಡೆಲಿವರಿಗೆ ಬಳಸುವಂತಿದೆ. ಈ ಇಬ್ಬರು ಮೊದಲು ಮನೆಯ ಬಳಿ ಬಂದು ಪರಿಶೀಲನೆ ಮಾಡಿ, ಬಳಿಕ ಕಳ್ಳತನಕ್ಕಿಳಿದಿದ್ದಾರೆ. ಎಕ್ಸ್‌ನಲ್ಲಿ ಘಟನೆಯ ವಿವರ, ಬೈಕ್‌ನ ನಂಬರ್ ಪ್ಲೇಟ್ ಹಾಗೂ ಮನೆಯೊಳಗೆ ಬಂದ ಕಳ್ಳನ ಫೋಟೋದ ಸ್ಕ್ರೀನ್‌ಶಾಟ್ ಕೂಡ

## ಸಂಸತ್‌ನಲ್ಲೇ ಸಿಗರೇಟ್ ಸೇದಿ ಸಿಕ್ಕಿಬಿದ್ದ ಟಿಎಂಸಿ ಸಂಸದ



**ನವದೆಹಲಿ:** ದೆಹಲಿಯಲ್ಲಿ ಚಳಿಗಾಲದ ಅಧಿವೇಶನದ ನಡುವೆ, ಸಂಸತ್ತಿನ ಆವರಣದಲ್ಲೇ ತೃಣಮೂಲ ಕಾಂಗ್ರೆಸ್ (ಟಿಎಂಸಿ) ಹಿರಿಯ ಸಂಸದ ಸೌಗತ ರಾಯ್ ಸಿಗರೇಟ್ ಸೇದುತ್ತಿರುವ ದೃಶ್ಯಗಳು ವೈರಲ್ ಆಗಿದ್ದು ಭಾರೀ ಚರ್ಚೆಗೆ ಗ್ರಾಸವಾಗಿದೆ. ಲೋಕಸಭೆಯಲ್ಲಿ ಇ-ಸಿಗರೇಟ್ ಬಳಕೆಯ ಕುರಿತಂತೆ ಗಂಭೀರ ಚರ್ಚೆಗಳು ನಡೆಯುತ್ತಿದ್ದ ಸಮಯದಲ್ಲಿ, ಸಂಸದನೇ ಸಾರ್ವಜನಿಕ ಸ್ಥಳದಲ್ಲಿ ಧೂಮಪಾನ ಮಾಡುತ್ತಿರುವ ದೃಶ್ಯ ಕಂಡುಬಂದಿರುವುದು ರಾಜಕೀಯ ವಲಯದಲ್ಲಿ ಹೊಸ ವಿವಾದಕ್ಕೆ ಕಾರಣವಾಗಿದೆ. ವೈರಲ್ ಆದ ವಿಡಿಯೋದಲ್ಲಿ ಸೌಗತ ರಾಯ್ ಸಂಸತ್ ಭವನದ ಹೊರಗಡೆ ಸಿಗರೇಟ್ ಸೇದುತ್ತಿರುವುದು ಸ್ಪಷ್ಟವಾಗಿ ಕಾಣುತ್ತದೆ. ಇದನ್ನು ಗಮನಿಸಿದ ಬಿಜೆಪಿ ಸಂಸದರು, ವಿಶೇಷವಾಗಿ ಗಿರಿರಾಜ್ ಸಿಂಗ್ ಮತ್ತು ಗಜೇಂದ್ರ ಸಿಂಗ್ ಶೇಖಾವತ್, "ಸಾರ್ವಜನಿಕ ಆರೋಗ್ಯಕ್ಕೆ ಅಪಾಯ ಉಂಟುಮಾಡುವ ಕಾರ್ಯವನ್ನು ಸಂಸದನೇ ಮಾಡುತ್ತಿದ್ದಾನೆ. ಸಂಸದೀಯ ವ್ಯವಸ್ಥೆಯ ಗೌರವಕ್ಕೆ ಧಕ್ಕೆಯುಂಟಾಗಿದೆ" ಎಂದು ಟಿಎಂಸಿ ಸಂಸದನ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ್ದಾರೆ.

ಬಿಜೆಪಿ ಸಂಸದ ಅನುರಾಗ್ ಠಾಕೂರ್ ಮಾತನಾಡುತ್ತಾ, "2019ರಲ್ಲಿ ಇ-ಸಿಗರೇಟ್‌ಗಳನ್ನು ನಿಷೇಧಿಸಿದ್ದೇವೆ. ಆದರೂ ಸಂಸತ್ತಿನೊಳಗೆ ಅಥವಾ ಅದರ ಸುತ್ತಮುತ್ತಾ ಸಂಸದರು ಇಂತಹ ಧೂಮಪಾನ ಮಾಡಿದರೆ ಅದು ಸದನದ ಘನತೆ ಕೆಡಿಸುತ್ತದೆ. ಇದು ಅತ್ಯಂತ ದುರದೃಷ್ಟಕರ" ಎಂದು ಕಿಡಿಕಾರಿದ್ದಾರೆ. ಈ ಸಂಬಂಧ ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಅವರಿಗೆ ಅಧಿಕೃತ ದೂರು ಸಲ್ಲಿಸಿರುವುದಾಗಿ ತಿಳಿಸಿದರು.

ಈ ಆರೋಪಗಳ ಬಗ್ಗೆ ಪ್ರತಿಕ್ರಿಯಿಸಿದ ಸೌಗತ ರಾಯ್, ತಮ್ಮ ವಿರುದ್ಧ ಮಾಡಿರುವ ದೂರುಗಳ ಬಗ್ಗೆ ಅನಿಸಿಕೆ ವ್ಯಕ್ತಪಡಿಸಿದ್ದು, "ನಾನು ಯಾರ ವಿರುದ್ಧವೂ ಏನೂ ಹೇಳಲು ಬಯಸುವುದಿಲ್ಲ. ನಾನು ಸದನದಲ್ಲೇ ಇರಲಿಲ್ಲ. ಯಾರು ಧೂಮಪಾನ ಮಾಡಿದರು, ಯಾರಿಂದ ದೂರು ಬಂತು ಎಂಬುದು ನನಗೆ ತಿಳಿದಿಲ್ಲ. ಸದನದ ನಿಯಮಗಳನ್ನು ಉಲ್ಲಂಘಿಸಲಾಗಿದೆ ಎಂದು ಕಂಡುಕೊಂಡರೆ, ಅದು ಸ್ಪೀಕರ್ ಅವರ ವ್ಯಾಪ್ತಿಯ ವಿಷಯ. ಇದರಲ್ಲಿ ರಾಜಕೀಯ ಲೇಪನ ಹಾಕಬಾರದು" ಎಂದು ಹೇಳಿದರು.

ಮಾಧ್ಯಮದವರೊಂದಿಗೆ ಮಾತನಾಡಿದಾಗ ಅವರು, "ಸಂಸತ್ ಕಟ್ಟಡದ ಒಳಗೆ ಧೂಮಪಾನ ನಿಷೇಧವಾಗಿದೆ. ಆದರೆ ಕಟ್ಟಡದ ಹೊರಗೆ ಧೂಮಪಾನ ಮಾಡುವುದು ನಿಯಮಬದ್ಧವಾಗಿದೆ. ನಾನು ಕಟ್ಟಡದ ಒಳಗೆ ಧೂಮಪಾನ ಮಾಡಿಲ್ಲ" ಎಂದು ಹೇಳಿದ್ದಾರೆ.

ಈ ವಿಷಯವು ಲೋಕಸಭೆಯಲ್ಲಿ ಪ್ರಶ್ನೋತ್ತರ ಅವಧಿಯವರೆಗೆ ತಲುಪಿದ್ದು, ಕೆಲ ಕ್ಷಣಗಳ ಕಾಲ ಗದ್ದಲವೂ ಉಂಟಾಯಿತು. ಗಜೇಂದ್ರ ಸಿಂಗ್ ಶೇಖಾವತ್ ಮಾತನಾಡಿದ್ದು, "ಒಬ್ಬ ಜವಾಬ್ದಾರಿಯುತ ಜನಪ್ರತಿನಿಧಿ ಇಂತಹ ನಡವಳಿಕೆಯ ಮೂಲಕ ದೇಶದ ಯುವಜನತೆಗೆ ತಪ್ಪು ಸಂದೇಶ ಕಳುಹಿಸುತ್ತಿದ್ದಾರೆ. ದೆಹಲಿಯ ವಾಯುಮಾಲಿನ್ಯ ಈಗಾಗಲೇ ತೀವ್ರವಾಗಿದೆ. ಇಂತಹ ಕಾರ್ಯಗಳು ಪರಿಸ್ಥಿತಿಯನ್ನು ಮತ್ತಷ್ಟು ಕೆಡಿಸುತ್ತವೆ" ಎಂದು ಆಕ್ರೋಶ ವ್ಯಕ್ತಪಡಿಸಿದರು.ಸಂಸತ್ ಸ್ಪೀಕರ್ ಓಂ ಬಿರ್ಲಾ, ಈ ಕುರಿತು ಮಾತನಾಡಿದ್ದು, "ಯಾರೇ ಆಗಲಿ, ಲಿಖಿತ ದೂರು ಕೊಟ್ಟರೆ ನಿಯಮಾನುಸಾರ ಸೂಕ್ತ ಕ್ರಮ ಕೈಗೊಳ್ಳಲಾಗುವುದು. ಸಂಸತ್ತಿನ ಘನತೆ ಕಾಯ್ದುಕೊಳ್ಳುವುದು ಎಲ್ಲ ಸಂಸದರ ಜವಾಬ್ದಾರಿ" ಎಂದು ಎಚ್ಚರಿಸಿದರು.

## ಭಾರತದ ಮೇಲೆ 50% ಸುಂಕ ಟ್ರಂಪ್ ನೀತಿ ಕೊನೆಯಾಗಬೇಕು ಅಮೆರಿಕದ ಸಂಸತ್ತಿನಲ್ಲಿ ನಿರ್ಣಯ ಮಂಡನೆ



**ವಾಷಿಂಗ್ಟನ್:** ಭಾರತದಿಂದ ಆಮದು ಮಾಡಿಕೊಳ್ಳುವ ವಸ್ತುಗಳ ಮೇಲೆ 50% ಸುಂಕ ಹೇರಿದ ಟ್ರಂಪ್ ಕ್ರಮವನ್ನು ಖಂಡಿಸಿ ಅಮೆರಿಕದ ಸಂಸತ್ತಿನಲ್ಲಿ ನಿರ್ಣಯವನ್ನು ಮಂಡಿಸಲಾಗಿದೆ.

ಕೆಳಮನೆಯಲ್ಲಿ ಮೂವರು ಸದಸ್ಯರು 50% ಸುಂಕ ವಿಧಿಸಿದ ಡೊನಾಲ್ಡ್ ಟ್ರಂಪ್ ಅವರ ರಾಷ್ಟ್ರೀಯ ತುರ್ತು ಪರಿಸ್ಥಿತಿ ಘೋಷಣೆಯನ್ನು ಕೊನೆಗೊಳಿಸುವ ಗುರಿಯನ್ನು ಹೊಂದಿರುವ ನಿರ್ಣಯವನ್ನು ಮಂಡಿಸಿದರು. ಭಾರತ ಪ್ರಮುಖ ಪಾಲುದಾರ ದೇಶವಾಗಿದೆ.


ಈ ಕ್ರಮಗಳು ಕಾನೂನುಬಾಹಿರ ಮತ್ತು ಅಮೆರಿಕನ್ ಕಾರ್ಮಿಕರು, ಗ್ರಾಹಕರು ಮತ್ತು ದ್ವಿಪಕ್ಷೀಯ ಸಂಬಂಧಗಳಿಗೆ ಹಾನಿಕಾರಕ ಎಂದು ಕರೆದಿದ್ದಾರೆ.

ಪ್ರತಿನಿಧಿಗಳಾದ ಡೆಬೊರಾ ರಾಸ್, ಮಾರ್ಕ್ ವೀಸಿ ಮತ್ತು ರಾಜಾ ಕೃಷ್ಣಮೂರ್ತಿ ಅವರು ಭಾರತ, ಬ್ರೆಜಿಲ್ ಮೇಲಿನ ಹೇರಿರುವ ನಿರ್ಣಯವನ್ನು ಕೊನೆಗೊಳಿಸಬೇಕೆಂದು ಆಗ್ರಹಿಸಿದ್ದಾರೆ. ಉತ್ತರ ಕೆರೊಲಿನಾದ ಆರ್ಥಿಕತೆಯು ವ್ಯಾಪಾರ, ಹೂಡಿಕೆ ಮತ್ತು ಭಾರತೀಯ ಅಮೆರಿಕನ್ ಸಮುದಾಯದ ಮೂಲಕ ಭಾರತದೊಂದಿಗೆ ಆಳವಾಗಿ ಸಂಪರ್ಕ ಹೊಂದಿದೆ ಎಂದು ಕಾಂಗ್ರೆಸ್ ಸದಸ್ಯೆ ರಾಸ್ ಹೇಳಿದರು.

ಭಾರತೀಯ ಕಂಪನಿಗಳು ರಾಜ್ಯದಲ್ಲಿ ಒಂದು ಶತಕೋಟಿ ಡಾಲರ್‌ಗಳಿಗಿಂತ ಹೆಚ್ಚು ಹೂಡಿಕೆ ಮಾಡಿವೆ. ಜೀವ ವಿಜ್ಞಾನ ಮತ್ತು ತಂತ್ರಜ್ಞಾನದಂತಹ ಕ್ಷೇತ್ರಗಳಲ್ಲಿ ಸಾವಿರಾರು ಉದ್ಯೋಗಗಳನ್ನು ಸೃಷ್ಟಿಸುತ್ತವೆ. ಆದರೆ ಉತ್ತರ ಕೆರೊಲಿನಾ ತಯಾರಕರು ವಾರ್ಷಿಕವಾಗಿ ಭಾರತಕ್ಕೆ ನೂರಾರು ಮಿಲಿಯನ್ ಡಾಲರ್‌ಗಳಷ್ಟು ಸರಕುಗಳನ್ನು ರಫ್ತು ಮಾಡುತ್ತಾರೆ ಎಂದರು. ಭಾರತವು ಒಂದು ಪ್ರಮುಖ ಸಾಂಸ್ಕೃತಿಕ, ಆರ್ಥಿಕ ಮತ್ತು ಕಾರ್ಯತಂತ್ರದ ಪಾಲುದಾರ ದೇಶವಾಗಿದೆ.

ಈ ಅಕ್ರಮ ಸುಂಕಗಳು ಈಗಾಗಲೇ ಹೆಚ್ಚುತ್ತಿರುವ ವೆಚ್ಚಗಳೊಂದಿಗೆ ಹೋರಾಡುತ್ತಿರುವ ಜನರ ಮೇಲೆ ಭಾರೀ ತೆರಿಗೆ ಬಿದ್ದಿದೆ ಎಂದು ಟ್ರಂಪ್ ಸರ್ಕಾರದ ನಿರ್ಧಾರವನ್ನು ಮಾರ್ಕ್ ವೀಸಿ ಟೀಕಿಸಿದರು. ವ್ಯಾಪಾರ ಒಪ್ಪಂದಕ್ಕೆ ಭಾರತ ಸಹಿ ಹಾಕದ್ದಕ್ಕೆ ಆರಂಭದಲ್ಲಿ ಡೊನಾಲ್ಡ್ ಟ್ರಂಪ್ ಭಾರತದ ಮೇಲೆ 25% ಸುಂಕವನ್ನು ವಿಧಿಸಿದ್ದರು. ಬಳಿಕ ರಷ್ಯಾದಿಂದ ಭಾರತ ಕಚ್ಚಾ ತೈಲವನ್ನು ಆಮದು ಮಾಡುತ್ತಿರುವುದಕ್ಕೆ ಪ್ರತಿಯಾಗಿ ದಂಡದ ರೂಪದಲ್ಲಿ ಕೆಲ ವಸ್ತುಗಳಿಗೆ 50% ಸುಂಕವನ್ನು ಹೇರಿದ್ದಾರೆ.

## ಪರಮೇಶ್ವರ್ ಸಿಎಂ ಆಗಲಿ ಅನ್ನೋದು ನನ್ನ ವೈಯಕ್ತಿಕ ಆಸೆ – ವಿ. ಸೋಮಣ್ಣ



**ತುಮಕೂರು:** ಗೃಹ ಸಚಿವ ಜಿ. ಪರಮೇಶ್ವರ್ ಈ ರಾಜ್ಯದ ಮುಖ್ಯಮಂತ್ರಿ ಆಗಲಿ ಅನ್ನುವ ವೈಯಕ್ತಿಕ ಆಸೆ ನನಗಿದೆ ಎಂದು ಕೇಂದ್ರ ಸಚಿವ ವಿ ಸೋಮಣ್ಣ ಅಭಿಪ್ರಾಯಪಟ್ಟಿದ್ದಾರೆ. ತುಮಕೂರಿನ ಹೆಗ್ಗೆರೆಯಲ್ಲಿ ರೇಲ್ವೆ ಮೇಲ್ಸೆತುವೆ ಕಾಮಗಾರಿಗೆ ಗುದ್ದಲಿ ಪೂಜೆ ಬಳಿಕ ವೇದಿಕೆ ಭಾಷಣ ವೇಳೆ ಕೇಂದ್ರ ಸಚಿವ ವಿ. ಸೋಮಣ್ಣ ತಮ್ಮ ಇಂಗಿತ ಹೊರಹಾಕಿದರು. ಪರಮೇಶ್ವರ್ ಅದೃಷ್ಟದ ಗೃಹ ಮಂತ್ರಿಯಾಗಿದ್ದಾರೆ. ಎಲ್ಲೋ ಒಂದು ಕಡೆ ಅವರು ಈ ರಾಜ್ಯದ ಮುಖ್ಯಮಂತ್ರಿ ಆಗಲಿ ಅನ್ನೋ ಆಸೆ ಇದೆ ಎಂದು ಹೇಳಿದರಲ್ಲದೇ ಇದನ್ನ ನಾನೊಬ್ಬನೇ ಹೇಳುತ್ತಿಲ್ಲ ತುಮಕೂರಿನ ಮಹಾಜನತೆಯ ಅಭಿಪ್ರಾಯ ಎಂದು ಅಭಿಪ್ರಾಯಿಸಿದರು. ಈ ವೇಳೆ ಮಧ್ಯ ಪ್ರವೇಶ ಮಾಡಿದ ಶಾಸಕ ಸುರೇಶ್ ಗೌಡ, ಡಿಕೆಶಿ ಕೂಡಾ ಇದ್ದಾರೆ ಎಂದರು.

ಅದಕ್ಕೆ ಪ್ರತಿಕ್ರಿಯಿಸಿದ ಸೋಮಣ್ಣ ಹಣೆಬರಹ ಯಾರಿಗೆ ಗೊತ್ತು, ಹಣೆ ಬರಹದಂತೆ ಆಗಲಿ ಎಂದರು. ಇದೇ ವೇಳೆ ತುಮಕೂರಿನಲ್ಲಿ ತಮ್ಮ ಗೆಲುವಿಗೆ ಕಾಂಗ್ರೆಸ್ ನಾಯಕರೂ ಸಹಕರಿಸಿದ್ದಾರೆ ಎಂಬ ಸ್ಫೋಟಕ ಮಾಹಿತಿ ಹಂಚಿಕೊಂಡರು.


ಬಿಜೆಪಿ-ಜೆಡಿಎಸ್ ನಾಯಕರು ನನ್ನ ಗೆಲುವಿಗೆ ಎಷ್ಟು ಸಹಕರಿಸಿದ್ದಾರೋ ಹಾಗೆಯೇ ಕಾಂಗ್ರೆಸ್‌ನ ಬಹುಕಾಲ ನಾಯಕರು ಸಾಥ್ ನೀಡಿದ್ದಾರೆ. ಕಾಂಗ್ರೆಸ್ ಅಭ್ಯರ್ಥಿ ಮುದ್ದಹನುಮೇಗೌಡರ ಸೋಲಿಗೆ ಪರೋಕ್ಷವಾಗಿ ಕಾಂಗ್ರೆಸ್ ನಾಯಕರೇ ಕಾರಣ ಅನ್ನೋದನ್ನ ಜಿ. ಪರಮೇಶ್ವರ್ ಇರುವ ವೇದಿಕೆಯಲ್ಲೇ ಸೋಮಣ್ಣ ಬಹಿರಂಗಪಡಿಸಿದರು.

ತುಮಕೂರು ಮೆಟ್ರೋ ಯೋಜನೆಗೆ ವಿರೋಧ

ಬೆಂಗಳೂರು-ತುಮಕೂರು ಮೆಟ್ರೊ ಯೋಜನೆಗೆ ಕಾಂಗ್ರೆಸ್ ನಾಯಕರು ವಿರೋಧ ಮಾಡುತಿದ್ದಾರೆ ಎಂದು ಕೇಂದ್ರ ಸಚಿವ ವಿ.ಸೋಮಣ್ಣ ಆರೋಪ ಮಾಡಿದ್ದಾರೆ. ತುಮಕೂರಿನ ಪಂಡಿತನಹಳ್ಳಿಯಲ್ಲಿ ರೇಲ್ವೆ ಮೇಲ್ಸೆತುವೆ ಕಾಮಗಾರಿಗೆ ಶಂಕುಸ್ಥಾಪನೆ ಮಾಡಿ ಮಾತನಾಡಿದ ಅವರು, ನಿನ್ನೆ ಒಬ್ಬ ಕಾಂಗ್ರೆಸ್ ನಾಯಕರು ನನ್ನ ಬಳಿ ಬಂದು ತುಮಕೂರು ಮೆಟ್ರೋಗೆ ವಿರೋಧ ವ್ಯಕ್ತಪಡಿಸಿದರು.

ಪರಮೇಶ್ವರ್ ಯಾಕೆ ತುಮಕೂರಿಗೆ ಮೆಟ್ರೋ ತೆಗೆದುಕೊಂಡು ಹೋಗುತ್ತಾರೆ ಎಂದು ಕೇಳಿದ್ರು. ಅದಕ್ಕೆ ನಾನು ಇಲ್ಲ ಇಲ್ಲ. ಪರಮೇಶ್ವರ್ ಒಳ್ಳೆ ಕೆಲಸ ಮಾಡುತಿದ್ದಾರೆ. ನಾನು ಅದಕ್ಕೆ ಸಹಕಾರ ಕೊಡುತ್ತೇನೆ ಎಂದೆ. ಅದಕ್ಕೆ ಆ ಕಾಂಗ್ರೆಸ್ ನಾಯಕ ಸುಮ್ಮನಾದರು. ನಾನು ಸಚಿವನಾದ ಬಳಿಕ ತುಮಕೂರು, ರಾಯದುರ್ಗ, ದಾವಣಗೆರೆ ರೈಲು ಮಾರ್ಗ ಕಾಮಗಾರಿಗೆ ಚಾಲನೆ ಕೊಟ್ಟಿದ್ದೆನೆ. 20ಕ್ಕೂ ಹೆಚ್ಚು ಮೇಲ್ಸೆತುವೆ ಮಾಡಿದ್ದೇನೆ ಎಂದರು.

## ನಕಲಿ ಆಧಾರ್ ಆರೋಪದ ನೆಪದಲ್ಲಿ ಹಣ ಪೀಕಿದ ಪೊಲೀಸಪ್ಪ



**ರಾಮನಗರ:** ಜಿಲ್ಲೆಯ ಕನಕಪುರದ ಅಂಗಡಿಯ ಮಾಲೀಕನನ್ನು ಬೆದರಿಸಿ ನಕಲಿ ಆಧಾರ್ ಕಾರ್ಡ್ ತಯಾರಿಸುತ್ತಿದ್ದಂತೆ ಬಿಂಬಿಸಿ 1.6 ಲಕ್ಷರೂ. ದೋಚಿದ್ದಾರೆಂದು ಪೊಲೀಸ್ ಅಧಿಕಾರಿಯೊಬ್ಬರ ಮೇಲೆ ಗಂಭೀರ ಆರೋಪ ಮಾಡಲಾಗಿದೆ. ಅಂಗಡಿ ಮಾಲೀಕನನ್ನು ಬೆದರಿಸಿದ ಪಿಎಸ್‌ಐ ಮತ್ತು ಪೊಲೀಸ್ ಪೇದೆಗಳ ಮೇಲೆ ಸೆನ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ನಡೆಸ ಲಾಗುತ್ತಿದೆ. ಮಾಲೀಕನನ್ನು ಬೆದರಿಸಿ 1.6 ಲಕ್ಷ ವಸೂಲಿ

ಜ್ಯೂಸ್ ಮತ್ತು ಜೆರಾಕ್ಸ್ ಅಂಗಡಿ ಮಾಲೀಕ ರಾಜೇಶ್‌ರನ್ನು ಕನಕಪುರದಿಂದ ಚನ್ನಪಟ್ಟಣ ಪೊಲೀಸ್ ಠಾಣೆಗೆ ಕರೆಸಿಕೊಂಡ ಪಿಎಸ್‌ಐ ಹರೀಶ್, ಆತನನ್ನು ಬೆದರಿಸಿದ್ದಲ್ಲದೆ ನಕಲಿ ಆಧಾರ್ ಕಾರ್ಡ್ ತಯಾರಿಸುತ್ತಿದ್ದಂತೆ ಬಿಂಬಿಸಿ 1.6 ಲಕ್ಷರೂ.ಗಳನ್ನು ವಸೂಲಿ ಮಾಡಿದ್ದಾರೆಂಬ ಆರೋಪ ಕೇಳಿ ಬಂದಿದೆ. ಅಕ್ಟೋ ಬರ್ 29ರಂದು ಈ ಘಟನೆ ನಡೆದಿದ್ದು, ಹರೀಶ್‌ನೊಂದಿಗೆ ಪೊಲೀಸ್ ಪೇದೆಗಳಾದ ವರದರಾಜು, ಸುಭಾಶ್ ಹಾಗೂ ಮತ್ತಿಬ್ಬರು ಸಿಬ್ಬಂದಿಯೂ ಈ ಕೃತ್ಯದಲ್ಲಿ ಶಾಮೀಲಾಗಿದ್ದಾರೆದು ಆರೋಪಿಸಲಾಗಿದೆ.

ಪಿಎಸ್‌ಐ ವಿರುದ್ಧ ಐಜಿಪಿಗೆ ದೂರು

ಚನ್ನಪಟ್ಟಣದ ಎರಡು ಪೆಟ್ರೋಲ್ ಬಂಕ್‌ಗಳಲ್ಲಿ ಸ್ಕ್ಯಾನ್ ಮಾಡಿ 60,000 ರೂ. ಮತ್ತು ಒಂದು ಲಕ್ಷ ರೂ ನಗದು ವಸೂಲಿ ಮಾಡಿದ್ದ ಹರೀಶ್ ಮತ್ತು ಆತನ ಸಂಗಡಿಗರು, FIR ದಾಖಲಿಸದೇ ರಾಜೇಶ್‌ನನ್ನು ವೈದ್ಯಕೀಯ ಪರೀಕ್ಷೆಗೆ ಒಳಪಡಿಸಿದ್ದರು.

ಈ ಘಟನೆಯ ಹಿನ್ನೆಲೆ, ರಾಜೇಶ್ ಕೇಂದ್ರ ವಲಯ IGP ಗೆ ದೂರು ಸಲ್ಲಿಸಿದ್ದರು. ಸಧ್ಯ PSI ಹರೀಶ್ ಮತ್ತು ನಾಲ್ಕು ಸಿಬ್ಬಂದಿ ವರ್ಗಾವಣೆಗೊಂಡು ಕಗ್ಗಲಿಪುರ ಪೊಲೀಸ್ ಠಾಣೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು, ಸೆನ್ ಠಾಣೆಯ DYSP ಕೆಂಚೇಗೌಡ ನೇತೃತ್ವದಲ್ಲಿ ಪ್ರಕರಣದ ತನಿಖೆ ನಡೆಸಲಾಗುತ್ತಿದೆ.

## 45 ವರ್ಷಗಳ ಎಲ್‌ಡಿಎಫ್ ಆಡಳಿತ ಅಂತ್ಯ – ತಿರುವನಂತಪುರಂ ಪಾಲಿಕೆಯಲ್ಲಿ ಬಿಜೆಪಿ ಕಮಾಲ್



**ತಿರುವನಂತಪುರಂ:** ಕೇರಳ ಸ್ಥಳೀಯ ಸಂಸ್ಥೆಗಳ ಚುನಾವಣೆಯ ಫಲಿತಾಂಶ ಪ್ರಕಟಗೊಳ್ಳುತ್ತಿದ್ದು ರಾಜಧಾನಿ ತಿರುವ ನಂತಪುರಂ ಪಾಲಿಕೆಯಲ್ಲಿಇದೇ ಮೊದಲ ಬಾರಿಗೆ ಬಿಜೆಪಿನೇತೃತ್ವದ ಎನ್‌ಡಿಎ ಅತಿದೊಡ್ಡ ಪಕ್ಷವಾಗಿ ಹೊರಹೊಮ್ಮಿದೆ. 101 ವಾರ್ಡ್‌ಗಳಲ್ಲಿ 50 ರಲ್ಲಿ ಬಿಜೆಪಿ ಜಯಗಳಿಸಿದೆ. ಈ ಮೂಲಕ ಎಲ್‌ಡಿಎಫ್‌ನ 45 ವರ್ಷಗಳ ಆಡಳಿತವನ್ನು ಕೊನೆಗೊಳಿಸಿದೆ. ಆಡಳಿತದಲ್ಲಿರುವ ಎಲ್‌ಡಿಎಫ್ 29 ವಾರ್ಡ್‌ಗಳಲ್ಲಿ ಜಯಗಳಿಸಿದರೆ ಯುಡಿಎಫ್ ಮೈತ್ರಿಕೂಟ 19 ವಾರ್ಡ್‌ಗಳಲ್ಲಿ ಮಾತ್ರ ಜಯ ಸಾಧಿಸಿದೆ.

ಎರಡು ಕ್ಷೇತ್ರವನ್ನು ಇತರರು ಗೆದ್ದಿದ್ದಾರೆ. ಬಹುಮತಕ್ಕೆ 51 ಸ್ಥಾನಗಳ ಅಗತ್ಯವಿರುವ ಹಿನ್ನೆಲೆಯಲ್ಲಿ ಪ್ರತ್ಯೇಕವಾಗಿ ನಿಂತು ಜಯಗಳಿಸಿದ ಇಬ್ಬರು ಸದಸ್ಯರ ಜೊತೆ ಬಿಜೆಪಿ ಮಾತುಕತೆ ನಡೆಸುತ್ತಿದೆ ಎಂದು ವರದಿಯಾಗಿದೆ. ಕೇರಳದ ಮೊದಲ ಮಹಿಳಾ ಐಪಿಎಸ್ ಅಧಿಕಾರಿ ಆರ್. ಶ್ರೀಲೇಖಾ ಅವರು ತಿರುವನಂತಪುರಂ ಕಾರ್ಪೊರೇಷನ್‌ನ ಶಾಸ್ತಮಂಗಲಂ ವಿಭಾಗದಿಂದ ಗೆದ್ದಿದ್ದಾರೆ. ಬಿಜೆಪಿ ಅಧಿಕಾರಕ್ಕೆ ಏರಿದರೆ ಶ್ರೀಲೇಖಾ ಅವರು ಮೇಯರ್ ಆಗಿ ಆಯ್ಕೆಯಾಗುವ ಸಾಧ್ಯತೆಯಿದೆ. 2020ರ ಚುನಾವಣೆಯಲ್ಲಿ ಎಲ್‌ಡಿಎಫ್ 51, ಯುಡಿಎಫ್ 10, ಎನ್‌ಡಿಎ 34, ಇತರರು 5 ಕ್ಷೇತ್ರಗಳಲ್ಲಿ ಜಯಗಳಿಸಿದ್ದರು ಬಿಜೆಪಿಗೆ ಕೇರಳದಲ್ಲಿ ಹೇಳಿಕೊಳ್ಳುವಷ್ಟು ದೊಡ್ಡ ನೆಲೆ ಇಲ್ಲ. ಇಲ್ಲಿನ ಚುನಾವಣೆಯಲ್ಲಿ ಎಡಪಕ್ಷಗಳ ನೇತೃತ್ವದ ಎಲ್‌ಡಿಎಫ್, ಕಾಂಗ್ರೆಸ್ ನೇತೃತ್ವದ ಯುಡಿಎಫ್ ಮಧ್ಯೆ ನೇರಾನೇರಾ ಸ್ಪರ್ಧೆ ನಡೆಯುತ್ತಿವೆ. ಆದರೆ ಈ ಬಾರಿ ತಿರುವನಂತಪುರಂದಲ್ಲಿ ಕಮಲ ಅರಳುವಲ್ಲಿ ಯಶಸ್ವಿಯಾಗಿದೆ. ಸದ್ಯ ಕಾಂಗ್ರೆಸ್ ನಾಯಕರ ವಿರೋಧಕ್ಕೆ ಕಾರಣವಾಗಿರುವ ಶಶಿ ತರೂರ್ ತಿರುವನಂತಪುರಂ ಲೋಕಸಭಾ ಕ್ಷೇತ್ರವನ್ನು ಪ್ರತಿನಿಧಿಸುತ್ತಿದ್ದಾರೆ.

2026 ರಲ್ಲಿ ಕೇರಳ ವಿಧಾನಸಭಾ ಚುನಾವಣೆ ನಡೆಯಲಿದೆ. ಆಡಳಿತರೂಢ ಎಲ್‌ಡಿಎಫ್‌ಗೆ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಭಾರೀ ಹಿನ್ನಡೆಯಾಗಿದೆ. ಕಾಂಗ್ರೆಸ್ ನೇತೃತ್ವದ ಯುಡಿಎಫ್ ಹೆಚ್ಚಿನ ಸ್ಥಾನಗಳನ್ನು ಗಳಿಸಿದೆ. ನಗರ ಪ್ರದೇಶದಲ್ಲಿ ಬಿಜೆಪಿ ಪರ ಒಲವು ವ್ಯಕ್ತವಾಗುತ್ತಿದೆ. ಇಂದು ಸಂಜೆ ವೇಳೆಗೆ ಅಂತಿಮ ಫಲಿತಾಂಶ ಪ್ರಕಟವಾಗಲಿದೆ.

ಸುದ್ದಿ ಹಾಗೂ ಜಾಹಿರಾತುಗಳಿಗಾಗಿ ಸಂಪರ್ಕಿಸಿ:
9538786812 / 9880655634

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.